BV
ಕನ್ನಡ ದಿನಪತ್ರಿಕೆ
# ಬೆಳಗಾವಿ ವರದಿ
06 ಮಾರ್ಚ್ । ಬುಧವಾರ
06 MARCH 2024
ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...
₹4 | ಸಂಪುಟ – 5 ಸಂಚಿಕೆ – 16 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ನೀರಿಲ್ಲದೆ ಪರದಾಟ: ಸಹಾಯವಾಣಿ ಆರಂಭಿಸಲು ಸಿಎಂ ಸೂಚನೆ



ಬೆಂಗಳೂರು: ರಾಜ್ಯದಲ್ಲಿ ಬರಗಾಲ ಎದುರಾಗಿದ್ದು, ಕುಡಿಯುವ ನೀರಿಲ್ಲದೆ ಜನ ಪರದಾಡುತ್ತಿದ್ದಾರೆ. ಇಂದು ಸಿಎಂ ಸಿದ್ದರಾಮಯ್ಯ ಗೃಹಕಚೇರಿ ಕೃಷ್ಣಾದಿಂದ ವಿಡಿಯೋ ಕಾನ್ಫರೆನ್ಸ್ ಮೂಲಕ ಅಧಿಕಾರಿಗಳೊಂದಿಗೆ ಬರ ನಿರ್ವಹಣೆ ಪರಿಶೀಲನೆ ಸಭೆ ನಡೆಸಿದ್ದಾರೆ.

ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಕಂಟ್ರೋಲ್ ರೂಮ್ ತೆರೆಯಲು ಚಿಂತಿಸಲಾಗಿದ್ದು, ಜೊತೆಗೆ ಸಹಾಯವಾಣಿ ಆರಂಭಿಸಲು ಸೂಚನೆ ನೀಡಿದ್ದಾರೆ. ರಾಜ್ಯದ 194 ತಾಲೂಕುಗಳಲ್ಲಿ ತೀವ್ರ ಬರವಿದೆ, ಕುಡಿಯಲು ನೀರಿನ ಸಮಸ್ಯೆ ಆಗಬಾರದು, ಎಷ್ಟೇ ಹಣ ಬೇಕಿದ್ದರೂ ಸರ್ಕಾರ ನೀಡುತ್ತದೆ ಎಂದಿದ್ದಾರೆ.

## ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟ: ಚೆನ್ನೈನಲ್ಲಿ ಐವರ ಬಂಧನ



ಚೆನ್ನೈ: ಬೆಂಗಳೂರಿನ ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ತಮಿಳುನಾಡಿನಲ್ಲಿ ಐವರನ್ನು ಬಂಧಿಸಲಾಗಿದೆ.

ಚೆನ್ನೈನ ಮನ್ನಾಡಿ, ಮುಥಿಯಾಲ್ ಪೇಟೈ ನಲ್ಲಿ ಇಂದು ಬೆಳಗ್ಗೆ ರಾಷ್ಟ್ರೀಯ ತನಿಖಾ ದಳ **(NIA)** ದಾಳಿ ನಡೆಸಿತ್ತು. ಆರಂಭದಲ್ಲಿ ಮೂವರು, ನಂತರ ಐವರನ್ನು ವಶಕ್ಕೆ ಪಡೆಯಲಾಗಿತ್ತು. ವಿಚಾರಣೆಯ ಬಳಿಕ ಐವರನ್ನು ಬಂಧಿಸಲಾಗಿದೆ ಎಂದು ಮಾಧ್ಯಮಗಳು ವರದಿ ಮಾಡಿದೆ.

ಮಾರ್ಚ್ 1 ಶುಕ್ರವಾರದಂದು ವೈಟ್‌ಫೀಲ್ಡ್ ಬಳಿ ಇರುವ ದಿ ರಾಮೇಶ್ವರಂ ಕೆಫೆಯಲ್ಲಿ ಎರಡು ಬಾಂಬ್ ಸ್ಫೋಟಗೊಂಡಿತ್ತು. ಈ ಬಾಂಬ್ ದಾಳಿಯಿಂದ 10 ಮಂದಿ ಗಾಯಗೊಂಡಿದ್ದರು.

## ಅಕ್ರಮ ಹಣ ವರ್ಗಾವಣೆ ಪ್ರಕರಣ: ಡಿಕೆ ಶಿವಕುಮಾರ್ಗೆ ಸುಪ್ರೀಂ ಕೋರ್ಟ್ನಲ್ಲಿ ಬಿಗ್ ರಿಲೀಫ್



ನವದೆಹಲಿ: ಅಕ್ರಮ ಹಣ ವರ್ಗಾವಣೆ ಪ್ರಕರಣದ ಆರೋಪ ಎದುರಿಸುತ್ತಿರುವ ಡಿಸಿಎಂ ಡಿಕೆ ಶಿವಕುಮಾರ್ಗೆ ಸುಪ್ರೀಂ ಕೋರ್ಟ್ ಮಂಗಳವಾರ ಬಿಗ್ ರಿಲೀಫ್ ನೀಡಿದೆ.

ಶಿವಕುಮಾರ್ ವಿರುದ್ಧ ಜಾರಿ ನಿರ್ದೇಶನಾಲಯ (ED) 120B ಅಡಿ ದಾಖಲಿಸಿದ್ದ ಪ್ರಕರಣವನ್ನು ಸುಪ್ರೀಂ ಕೋರ್ಟ್ ರದ್ದುಗೊಳಿಸಿದೆ. ಈ ಪ್ರಕರಣಕ್ಕೆ ಸಂಬಂಧಿಸಿ ಕರ್ನಾಟಕ ಹೈಕೋರ್ಟ್ ನೀಡಿದ್ದ ಆದೇಶವನ್ನು ಸರ್ವೋಚ್ಚ ನ್ಯಾಯಾಲಯ ರದ್ದುಗೊಳಿಸಿದೆ.

# ವಿಶ್ವದ ಅತ್ಯಂತ ದೊಡ್ಡ ರಾಜಕೀಯ ಪಕ್ಷ ನಮ್ಮದು: ನಡ್ಡಾ



ಬೆಳಗಾವಿ: ವಿಶ್ವದ ಅತ್ಯಂತ ದೊಡ್ಡ ರಾಜಕೀಯ ಪಕ್ಷ ನಮ್ಮದು. ಅಣ್ಣಾಸಾಹೇಬ್ ಜೊಲ್ಲೆಯವರು ಸೇರಿ 303 ಸಂಸದರು ನಮ್ಮ ಪಕ್ಷದವರು ಲೋಕಸಭೆಯಲ್ಲಿದ್ದಾರೆ. ನಮ್ಮ ಯುವಜನರಿಗೆ ತರಬೇತಿ ನೀಡಿ ಪ್ರಧಾನಿ ಮೋದಿಯವರು ಆತ್ಮನಿರ್ಭರರನ್ನಾಗಿ ಮಾಡಿದ್ದಾರೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರು ತಿಳಿಸಿದರು.

ಚಿಕ್ಕೋಡಿಯಲ್ಲಿ ಮಂಗಳವಾರ ಬಿಜೆಪಿ ಬೂತ್ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಅಯೋಧ್ಯೆಯಲ್ಲಿ ಶ್ರೀರಾಮಮಂದಿರ ನಿರ್ಮಾಣ, ಜಮ್ಮು-ಕಾಶ್ಮೀರಕ್ಕೆ ಸಂಬಂಧಿಸಿದ 370ನೇ ವಿಧಿ ರದ್ದು ಸೇರಿದಂತೆ ವಿವಿಧ ಭರವಸೆಗಳನ್ನು ಈಡೇರಿಸಿ ಬಿಜೆಪಿ ನುಡಿದಂತೆ ನಡೆದಿದೆ. ದೂರದೃಷ್ಟಿಯಿರುವ ಬಿಜೆಪಿಯನ್ನು ಜನತೆ ಬೆಂಬಲಿಸುವ ವಿಶ್ವಾಸವಿದೆ ಎಂದರು.

ಪಾಕಿಸ್ತಾನ ಜಿಂದಾಬಾದ್ ಘೋಷಣೆ ಕೂಗುವ ರಾಜ್ಯಸಭಾ ಸದಸ್ಯರಿರುವ ಕಾಂಗ್ರೆಸ್ ಪಕ್ಷದವರನ್ನು ರಾಜ್ಯದ ಜನತೆ ಬೆಂಬಲಿಸುವುದಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, ನಮ್ಮ ಸರಕಾರ ಇದ್ದಾಗ ಶಾಂತ ಪರಿಸ್ಥಿತಿ ನೆಲೆಸಿತ್ತು. ಈಗ ಬಾಂಬ್ ಸ್ಫೋಟಿಸುತ್ತಿದೆ. ಬಡವರು, ಮಹಿಳೆಯರು (ನಾರಿಶಕ್ತಿ), ರೈತರು, ಯುವಜನತೆಯ ಆಶಯಗಳನ್ನು ಈಡೇರಿಸಿದ ಪಕ್ಷವಾಗಿ ಬಿಜೆಪಿ ಬೆಳೆದಿದೆ. ಬಿಜೆಪಿ ಸಿದ್ಧಾಂತ ಆಧರಿಸಿದ ಪಕ್ಷ. ಮುಸ್ಲಿಮ್ ಮಹಿಳೆಯರಿಗೆ ಅನ್ಯಾಯ ಆಗಲು ಬಿಡುವುದಿಲ್ಲ ಎಂದು ನಾವು ಹೇಳಿದ್ದೆವು. ತ್ರಿವಳಿ ತಲಾಖ್ ಪದ್ಧತಿಯನ್ನು ನಾವು ರದ್ದು ಮಾಡಿದ್ದೇವೆ. ಆದರೆ, ಕಾಂಗ್ರೆಸ್ ಪಕ್ಷ ತುಷ್ಟೀಕರಣದ ಕಾರಣಕ್ಕಾಗಿ ಈ ಕಡೆ ಗಮನ ಹರಿಸಿರಲಿಲ್ಲ ಎಂದು ವಿವರಿಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಮಾತನಾಡಿ, ಲೋಕಸಭಾ ಚುನಾವಣೆಗೆ ಕೇವಲ 50–60 ದಿನಗಳು ಮಾತ್ರ ಬಾಕಿ ಇದೆ. ಬಿಜೆಪಿ– ಜೆಡಿಎಸ್ ಒಂದಾಗಿ ರಾಜ್ಯದ ಎಲ್ಲ 28 ಕ್ಷೇತ್ರಗಳನ್ನು ಗೆಲ್ಲಲು ಶಪಥ ಮಾಡಿ ಹೊರಟಿದ್ದೇನೆ. ಚಿಕ್ಕೋಡಿ ಲೋಕಸಭಾ ಕ್ಷೇತ್ರದಲ್ಲೂ ದೊಡ್ಡ ಅಂತರದಲ್ಲಿ ಬಿಜೆಪಿ ಗೆಲ್ಲಿಸಲು ಮನವಿ ಮಾಡಿದರು. 28ಕ್ಕೆ 28 ಕ್ಷೇತ್ರಗಳನ್ನು ಗೆಲ್ಲಿಸಿಕೊಡುವ ಭರವಸೆಯನ್ನು ನಡ್ಡಾಜೀ ಅವರಿಗೆ ನೀಡುವುದಾಗಿ ವಿಶ್ವಾಸದಿಂದ ನುಡಿದರು.

ರಾಜ್ಯಸಭಾ ಮಾಜಿ ಸದಸ್ಯ ಪ್ರಭಾಕರ್ ಕೋರೆ, ಶಾಸಕ ರಮೇಶ್ ಕತ್ತಿ, ಮಾಜಿ ಸಚಿವೆ ಶಶಿಕಲಾ ಜೊಲ್ಲೆ, ಚಿಕ್ಕೋಡಿ ಜಿಲ್ಲಾಧ್ಯಕ್ಷ ಸತೀಶ್ ಅಪ್ಪಾಜಿಗೋಲ್, ಲೋಕಸಭಾ ಚುನಾವಣೆ ರಾಜ್ಯ ಉಸ್ತುವಾರಿ ಮತ್ತು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಧಾ ಮೋಹನ್ ದಾಸ್ ಅಗರ್ವಾಲ್, ವಿಭಾಗ ಸಹ ಪ್ರಭಾರಿ ಬಸವರಾಜ ಯಂಕಂಚಿ, ಎಸ್ಟಿ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಬಸವರಾಜ ಹುಂದ್ರಿ, ವಿಧಾನಪರಿಷತ್ ಮಾಜಿ ಸದಸ್ಯ ಮಹಂತೇಶ್ ಕವಟಗಿಮಠ, ಮಾಜಿ ಶಾಸಕ ಅಭಯ್ ಪಾಟೀಲ್, ಶಾಸಕರಾದ ದುರ್ಯೋಧನ ಐಹೊಳೆ, ನಿಖಿಲ್ ಕತ್ತಿ, ಮಾಜಿ ಶಾಸಕ ಶ್ರೀಮಂತ ಪಾಟೀಲ್, ಮಾಜಿ ಶಾಸಕ ಮಹೇಶ್ ಕುಮಟ್ಟಳ್ಳಿ , ವಿಭಾಗ ಪ್ರಭಾರಿ ಚಂದ್ರಶೇಖರ್ ಕವಟಗಿ, ಶಾಸಕ ಅಭಯ್ ಪಾಟೀಲ್, ಮತ್ತು ಹನುಮಂತ ನಿರಾಣಿ ಮತ್ತಿತರ ನಾಯಕರು, ಕಾರ್ಯಕರ್ತರು ಭಾಗವಹಿಸಿದ್ದರು.

### ಲೋಕಸಮರದಲ್ಲಿ ಪ್ರಚಂಡ ದಿಗ್ವಿಜಯಕ್ಕೆ ಬಿಜೆಪಿ ಸಿದ್ಧತೆ

ಬೆಂಗಳೂರು: ಬೆಳಗಾವಿಯಲ್ಲಿ ಮಂಗಳವಾರ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರ ನೇತೃತ್ವದಲ್ಲಿ ಬೆಳಗಾವಿ ವಲಯದ ಕೋರ್ ಕಮಿಟಿ ಸಭೆ ನಡೆಸಲಾಯಿತು. ಲೋಕಸಮರದಲ್ಲಿ ಪ್ರಚಂಡ ದಿಗ್ವಿಜಯ ಸಾಧಿಸುವ ನಿಟ್ಟಿನಲ್ಲಿನ ಸಿದ್ಧತೆಗಳು ಹಾಗೂ ಕಾರ್ಯತಂತ್ರಗಳ ಕುರಿತು ಚರ್ಚಿಸಲಾಯಿತು.

## ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೇಸ್: ಕೊನೆಗೂ ಮೂವರು ಅರೆಸ್ಟ್



ಬೆಂಗಳೂರು: ವಿಧಾನಸೌಧದ ಆವರಣದಲ್ಲಿಯೇ ಪಾಕಿಸ್ತಾನ್ ಜಿಂದಾಬಾದ್ ಎಂದು ಘೋಷಣೆ ಕೂಗಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಕೊನೆಗೂ ಪೊಲೀಸರು ಮೂವರನ್ನು ಬಂಧಿಸಿದ್ದಾರೆ.

ವಿಧಾನಸೌಧದಲ್ಲಿ ಪಾಕ್ ಪರ ಘೋಷಣೆ ಕೂಗಿದ್ದ ಬಗ್ಗೆ ಸ್ವಯಂ ಪ್ರೇರಿತವಾಗಿ ಸುಮೋಟೋ ಕೇಸ್ ದಾಖಲಿಸಿಕೊಂಡಿದ್ದ ವಿಧಾನಸೌಧ ಪೊಲೀಸರು, ಈಗ ದೆಹಲಿ ಮೂಲದ ಇಲ್ತಾಜ್, ಆರ್.ಟಿ. ನಗರ ಮೂಲದ ಮುನಾವರ್ ಹಾಗೂ ಹಾವೇರಿ ಜಿಲ್ಲೆ ಬ್ಯಾಡಗಿಯ ಮೊಹಮದ್ ಶಫಿ ನಾಶಿಪುಡಿ ಅವರನ್ನು ಬಂಧಿಸಿದ್ದಾರೆ. ಸದ್ಯ ಈ ಮೂವರು ಆರೋಪಿಗಳನ್ನು ವಿಚಾರಣೆಗೆ ಒಳಪಡಿಸಿ ಬಳಿಕ ನ್ಯಾಯಾಲಕ್ಕೆ ಹಾಜರುಪಡಿಸಲಿದ್ದಾರೆ.

ಬಂಧಿತ ಆರೋಪಿಗಳ ಪೈಕಿ ಓರ್ವ ಪಾಕಿಸ್ತಾನ ಅಂತಾ ಕೂಗಿದರೆ ಉಳಿದ ಇಬ್ಬರು ಜಿಂದಾಬಾದ್, ಜಿಂದಾಬಾದ್ ಅಂತಾ ಕೂಗುತ್ತಾರೆ. ರಾಜ್ಯಸಭಾ ಚುನಾವಣೆಯಲ್ಲಿ ನಾಸಿರ್ ಹುಸೇನ್ ಗೆಲುವು ಸಾಧಿಸಿದ್ದರು. ಗೆದ್ದ ಖುಷಿಯಲ್ಲಿ ನಾಸಿರ್ ಹುಸೇನ್ ಬೆಂಬಲಿಗರು ವಿಧಾನಸೌಧದಲ್ಲಿ ಸಂಭ್ರಮಾಚರಣೆ ವೇಳೆ ಪಾಕಿಸ್ತಾನ ಜಿಂದಾಬಾದ್ ಕೂಗಿದ ಆರೋಪ ರಾಜಕೀಯದಲ್ಲಿ ದೊಡ್ಡ ಬಿರುಗಾಳಿ ಎಬ್ಬಿಸಿತ್ತು. ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿತ್ತು.

ಈಖಐ ವರದಿ, ಸಾಂದರ್ಭಿಕ ಸಾಕ್ಷ್ಯಗಳು ಆಧರಿಸಿ ಆರೋಪಿಗಳ ಬಂಧನ: ಪಾಕ್ ಪರ ಘೋಷಣೆ ಕೂಗಿದ್ದ ಮೂವರು ಆರೋಪಿಗಳ ಬಂಧನವನ್ನು ಖಚಿತಪಡಿಸಿರುವ ಬೆಂಗಳೂರಿನ ಕೇಂದ್ರ ವಿಭಾಗದ ಪೊಲೀಸರು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಈಖಐ ವರದಿ, ಸಾಂದರ್ಭಿಕ ಸಾಕ್ಷ್ಯಗಳು, ಆರೋಪಿಗಳ ಹೇಳಿಕೆ ಹಾಗೂ ತನಿಖೆ ವೇಳೆ ಸಿಕ್ಕ ಸಾಕ್ಷ್ಯಗಳ ಆಧರಿಸಿ ಆರೋಪಿಗಳನ್ನು ಬಂಧಿಸಿದ್ದೇವೆ. ಸದ್ಯ ಆರೋಪಿಗಳನ್ನು ಬಂಧಿಸಿದ್ದು ವೈದ್ಯಕೀಯ ಪರೀಕ್ಷೆ ನಡೀತಾ ಇದೆ. ವೈದ್ಯಕೀಯ ಪರೀಕ್ಷೆ ಬಳಿಕ ಕೋರಮಂಗಲದ ನ್ಯಾಯಾಧೀಶರ ಮನೆಗೆ ಹಾಜರುಪಡಿಸಿ ಬಳಿಕ ಕಸ್ಟಡಿಗೆ ಪಡೆಯಲಿದ್ದಾರೆ.

## ರಾಜ್ಯ ಸರ್ಕಾರಕ್ಕೆ ಬಾಂಬ್ ಬೆದರಿಕೆ: ಇಮೇಲ್ ಕಳಿಸಿದ ಕಿಡಿಗೇಡಿಗಳು





ಬೆಂಗಳೂರು: ರಾಜ್ಯ ಸರ್ಕಾರಕ್ಕೆ ಬಾಂಬ್ ಬೆದರಿಕೆ ಹಾಕುವ ಇಮೇಲ್ ಬಂದಿದೆ.ಇಮೇಲ್ ಮೂಲಕ ಬಂದ ಬೆದರಿಕೆ ನಿರ್ದಿಷ್ಟವಾಗಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಮತ್ತು ಗೃಹ ಸಚಿವರು ಸೇರಿದಂತೆ ಪ್ರಮುಖ ವ್ಯಕ್ತಿಗಳನ್ನು ಗುರಿಯಾಗಿಸಿಕೊಂಡಿವೆ.

ವರದಿಗಳ ಪ್ರಕಾರ, ಶಾಹಿದ್ ಖಾನ್ ಎಂಬ ಹೆಸರಿನ ವ್ಯಕ್ತಿಯೊಬ್ಬ ಕಳುಹಿಸಿದ್ದಾರೆಂದು ಹೇಳಲಾದ ಬೆದರಿಕೆ ಇಮೇಲ್ಗಳು ಶನಿವಾರ ಮಧ್ಯಾಹ್ನ 2: 48 ಕ್ಕೆ ನಗರದಲ್ಲಿ ಸಂಭವಿಸಲಿರುವ ಬಾಂಬ್ ಸ್ಫೋಟಗಳ ಬಗ್ಗೆ ಎಚ್ಚರಿಕೆ ನೀಡಿವೆ. ಬಸ್ಸುಗಳು, ರೈಲುಗಳು, ದೇವಾಲಯಗಳು ಮತ್ತು ಹೋಟೆಲ್ಗಳಲ್ಲಿ ಮತ್ತು ಅಂಬಾರಿ ಉತ್ಸವ ಉತ್ಸವಗಳಲ್ಲಿ ಸ್ಫೋಟಕಗಳನ್ನು ಇರಿಸಲಾಗಿದೆ ಎಂದು ಬೆದರಿಕೆ ಹಾಕಲಾಗಿದೆ.

ಬೆದರಿಕೆಗಳನ್ನು ಸ್ವೀಕರಿಸಿದ ನಂತರ ಅಧಿಕಾರಿಗಳು ಕ್ರಮ ಕೈಗೊಂಡರು, ಸೈಬರ್ ಅಪರಾಧ ಠಾಣೆಯಲ್ಲಿ ಎಫ್ಐಆರ್ ದಾಖಲಿಸಿದರು ಮತ್ತು ತಕ್ಷಣದ ತನಿಖೆಯನ್ನು ಪ್ರಾರಂಭಿಸಿದರು. ವಿಶೇಷವಾಗಿ ಕಳವಳಕಾರಿ ಸಂಗತಿಯೆಂದರೆ, ಬೆದರಿಕೆ ಇಮೇಲ್ಗಳು ಎಫ್ಐಆರ್ನಲ್ಲಿಯೇ ವಿವರಿಸಲಾದ ಸ್ಫೋಟಕ ಅಂಶಗಳನ್ನು ಉಲ್ಲೇಖಿಸಿವೆ, ಇದು ಮಾಹಿತಿಯ ಮೂಲದ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ರಾಜ್ಯ ಸರ್ಕಾರಿ ಅಧಿಕಾರಿಗಳು ಮತ್ತು ಸಾರ್ವಜನಿಕ ಸ್ಥಳಗಳನ್ನು ಗುರಿಯಾಗಿಸಿಕೊಂಡು ಸರಣಿ ಬಾಂಬ್ ಬೆದರಿಕೆಗಳು ಬಂದ ನಂತರ ಕರ್ನಾಟಕದಲ್ಲಿ ಹೆಚ್ಚಿನ ಎಚ್ಚರಿಕೆ ವಹಿಸಲಾಗಿದೆ. ಇಮೇಲ್ ಮೂಲಕ ಕಳುಹಿಸಲಾದ ಬೆದರಿಕೆಗಳಿಂದಾಗಿ ಕಾನೂನು ಜಾರಿ ಸಂಸ್ಥೆಗಳಿಂದ ತನಿಖೆ ಶುರುವಾಗಿವೆ, ಅವರು ಈಗ ದುಷ್ಕರ್ಮಿಗಳನ್ನು ಗುರುತಿಸಲು ಸಮಗ್ರ ತನಿಖೆ ನಡೆಸುತ್ತಿದ್ದಾರೆ.

## ದುಬೈನಿಂದ ಬೆಂಗಳೂರಿಗೆ ಕೋಟ್ಯಾಂತರ ಮೌಲ್ಯದ ಚಿನ್ನ, ನಗದು ಸಾಗಾಟ: ಆರೋಪಿ ವಶಕ್ಕೆ



ಬೆಂಗಳೂರು: ವಿದೇಶಕ್ಕೆ ಪ್ರಯಾಣ ಬೆಳೆಸಿದ್ದ ವ್ಯಕ್ತಿಯಿಂದ 1 ಕೋಟಿ ರೂಪಾಯಿಗೂ ಅಧಿಕ ಮೊತ್ತದ ಬಂಗಾರ ಹಾಗೂ ನಗದು ಹಣವನ್ನು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಕಸ್ಟಮ್ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ.


ಅಕ್ರಮವಾಗಿ ಸಾಗಿಸಲು ಯತ್ನಿಸಿದ್ದ 500 ಮುಖ ಬೆಲೆಯ 51 ಲಕ್ಷ 95 ಸಾವಿರದ 500 ರೂಪಾಯಿ ಹಾಗೂ 50 ಲಕ್ಷ 79 ಸಾವಿರದ 967 ರೂಪಾಯಿ ಮೌಲ್ಯದ 824.67 ಗ್ರಾಂ ತೂಕದ ಚಿನ್ನವನ್ನು ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ. ದುಬೈನಿಂದ ಅಕ್ರಮವಾಗಿ ಚಿನ್ನವನ್ನು ಪೇಸ್ಟ್ ರೂಪದಲ್ಲಿ ಬೆಂಗಳೂರಿಗೆ ತೆಗೆದುಕೊಂಡು ಬಂದಿದ್ದಾನೆ.

ಇದನ್ನು ಮತ್ತೆ ಕಳ್ಳಸಾಗಣೆ ಮಾಡಲು ಚೆಕ್ ಇನ್ ಬ್ಯಾಗೇಜ್ನಲ್ಲಿ ಹಣ ಮರೆಮಾಚಿ ಸಾಗಿಸಲು ಯತ್ನಿಸಿದ್ದನು. ಈ ವೇಳೆ ವಿಮಾನ ನಿಲ್ದಾಣದಲ್ಲಿ ಕಸ್ಟಮ್ ಅಧಿಕಾರಿಗಳು ಪರಿಶೀಲನೆ ನಡೆಸುವಾಗ ಕಳ್ಳಸಾಗಣೆ ಮಾಡುತ್ತಿದ್ದ ಚಿನ್ನ, ಹಣ ಪತ್ತೆಯಾಗಿದೆ. ಸದ್ಯ ಆರೋಪಿಯನ್ನು ವಶಕ್ಕೆ ಪಡೆದು ಅಧಿಕಾರಿಗಳು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

# ಮಾದಕ ವ್ಯಸನಿಗಳ ಪತ್ತೆ, ಮಾದಕ ದ್ರವ್ಯ ಜಾಲಗಳ ನಾಶ, ಅಪರಾಧಿಗಳ ಬಂಧನ ಮತ್ತು ವ್ಯಸನಿಗಳಿಗೆ ಪುನರ್ವಸತಿ ಕಲ್ಪಿಸುವ ಮೂಲಕ, ಮಾದಕ ದ್ರವ್ಯ ಮುಕ್ತ ಗುರಿಯನ್ನು ಸಾಧಿಸುವೆಡೆ ಭಾರತ ವೇಗವಾಗಿ ಸಾಗುತ್ತಿದೆ: ಅಮಿತ್ ಶಾ

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಮಾದಕವಸ್ತು ವ್ಯಾಪಾರ ಮತ್ತು ಅದರ ದುಷ್ಪರಿಣಾಮಗಳನ್ನು ಎದುರಿಸುವಲ್ಲಿ ಮೋದಿ ಸರ್ಕಾರದ ಯಶಸ್ಸಿನ ಕುರಿತು ಮೂರು ವೀಡಿಯೊಗಳನ್ನು ಬಿಡುಗಡೆ ಮಾಡಿದರು. ದೇಶದಲ್ಲಿ ಡ್ರಗ್ಸ್ ಪತ್ತೆ, ಜಾಲಗಳ ನಾಶ, ಅಪರಾಧಿಗಳ ಬಂಧನ ಮತ್ತು ಮಾದಕ ವ್ಯಸನಿಗಳ ಪುನರ್ವಸತಿ ಮೂಲಕ, ಮಾದಕ ದ್ರವ್ಯ ಮುಕ್ತ ಭಾರತದ ಗುರಿಯನ್ನು ಸಾಧಿಸುವತ್ತ ಮೋದಿ ಸರ್ಕಾರ ವೇಗವಾಗಿ ಸಾಗುತ್ತಿದೆ. ಮೋದಿಯವರ ನಾಯಕತ್ವ ಮತ್ತು ಅಮಿತ್ ಶಾ ಅವರ ಮಾರ್ಗದರ್ಶನದಲ್ಲಿ ಮಾದಕ ದ್ರವ್ಯ ಮುಕ್ತ ಭಾರತವು ಮುಂಬರುವ ಪೀಳಿಗೆಗೆ ಬಹುದೊಡ್ಡ ಕೊಡುಗೆಯಾಗಲಿದೆ.

ಸ್ವಾತಂತ್ರ್ಯದ ಸುವರ್ಣ ಯುಗದಲ್ಲಿ, ಪ್ರಧಾನಿ ನರೇಂದ್ರ ಮೋದಿಯವರ ಕಟ್ಟುನಿಟ್ಟಿನ ಧೋರಣೆ ಮತ್ತು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರ ಸಮರ್ಥ ಮಾರ್ಗದರ್ಶನದಲ್ಲಿ, ಮಾದಕ ದ್ರವ್ಯ ವ್ಯಾಪಾರವನ್ನು ತಡೆಗಟ್ಟಲು ಸಿದ್ಧತೆಗಳು ಭರದಿಂದ ನಡೆಯುತ್ತಿವೆ, ಈ ಕ್ರಮಗಳ ಮೂಲಕ ಮಾದಕ ದ್ರವ್ಯಗಳ ಜಪ್ತಿ ಮತ್ತು ಬಂಧನಗಳ ಸಂಖ್ಯೆಯಲ್ಲಿ ತೀವ್ರ ಹೆಚ್ಚಳವಾಗಿದೆ. ಶಾ ಅವರ ನಿಷ್ಠುರ ನೀತಿಗಳಿಂದಾಗಿ, ಸರ್ಕಾರಗಳು ಮತ್ತು ಏಜೆನ್ಸಿಗಳ ನಡುವಿನ ಸಮನ್ವಯ, ಸಹಕಾರ ಮತ್ತು ಸಹಯೋಗದ ಮೂಲಕ, ಮಾದಕವಸ್ತು ವಶಪಡಿಸಿಕೊಳ್ಳುವಿಕೆಯಲ್ಲಿ ಮತ್ತು ಪ್ರಕರಣಗಳ ದಾಖಲೆಗಳಲ್ಲಿ ವೃದ್ಧಿಯಾಗಿದೆ.



ಮೋದಿಯವರ ನಾಯಕತ್ವ ಮತ್ತು ಅಮಿತ್ ಶಾ ಅವರ ಮಾರ್ಗದರ್ಶನದಲ್ಲಿ ಗೃಹ ಸಚಿವಾಲಯವು ಅಕ್ರಮ ಮಾದಕ ದ್ರವ್ಯದ ವ್ಯಾಪಾರವನ್ನು ತಡೆಯಲು ನಡೆಸಿದ ಬಹುಮುಖ ಪ್ರಯತ್ನಗಳಿಂದ, ವಶಪಡಿಸಿಕೊಂಡ ಮಾದಕವಸ್ತುಗಳ ಪ್ರಮಾಣವು ಸುಮಾರು 100% ಹೆಚ್ಚಾಗಿವೆ ಮತ್ತು ಅದನ್ನು ವ್ಯವಹರಿಸುವವರ ವಿರುದ್ಧ ದಾಖಲಾಗುವ ಪ್ರಕರಣಗಳು 152% ಹೆಚ್ಚಾಗಿವೆ.

ಅಂಕಿಅಂಶಗಳ ಪ್ರಕಾರ, 2006 ರಿಂದ 2013 ರ ಅವಧಿಯಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ 1257 ಇತ್ತು, ಇದು 2014–2023 ರ ಅವಧಿಯಲ್ಲಿ 3 ಪಟ್ಟು ಏರಿಕೆಯಾಗಿ 3755 ಕ್ಕೆ ತಲುಪಿದೆ. 2006–13 ರ ಅವಧಿಯಲ್ಲಿ 1363 ಬಂಧನಗಳಾಗಿದ್ದವು, ಇವು 4 ಪಟ್ಟು ಹೆಚ್ಚಿ 2014–23 ಅವಧಿಯಲ್ಲಿ ಬಂಧನಗಳ ಸಂಖ್ಯೆ 5745 ಕ್ಕೆ ತಲುಪಿದೆ. 2006–13ರಲ್ಲಿ ವಶಪಡಿಸಿಕೊಂಡಿದ್ದ 1.52 ಲಕ್ಷ ಕೆಜಿ ಡ್ರಗ್ಸ್ ಪ್ರಮಾಣ ಮೋದಿ ಆಡಳಿತದಲ್ಲಿ ದ್ವಿಗುಣಗೊಂಡು 3.95 ಲಕ್ಷ ಕೆಜಿಗೆ ತಲುಪಿದೆ. 2006–13ರ ಅವಧಿಯಲ್ಲಿ ವಶಪಡಿಸಿಕೊಂಡ ಡ್ರಗ್ಸ್ ಮೌಲ್ಯವು ರೂ.768 ಕೋಟಿಯಿತ್ತು, ಇದು ಮೋದಿ ಸರ್ಕಾರದ ಅವಧಿಯಲ್ಲಿ 30 ಪಟ್ಟು ಹೆಚ್ಚಾಗಿ ರೂ.22,000 ಕೋಟಿಗೆ ತಲುಪಿದೆ.

ಮೋದಿಯವರ ನಾಯಕತ್ವ ಮತ್ತು ಶಾ ಅವರ ದೂರದೃಷ್ಟಿಯಿಂದಾಗಿ, ಮಾದಕ ದ್ರವ್ಯ ವಿರೋಧಿ ಸಂಸ್ಥೆಗಳು 12,000 ಕೋಟಿ ರೂಪಾಯಿ ಮೌಲ್ಯದ 12 ಲಕ್ಷ ಕಿಲೋಗ್ರಾಂಗಳಷ್ಟು ಡ್ರಗ್ಸ್‌ಅನ್ನು ನಾಶಪಡಿಸುವ ಅಭೂತಪೂರ್ವ ಕೆಲಸವನ್ನು ಮಾಡಿವೆ. ಮಾದಕ ದ್ರವ್ಯ ಮುಕ್ತ ಭಾರತದ ಕನಸನ್ನು ನನಸಾಗಿಸಲು ಕೇಂದ್ರ ಮತ್ತು ರಾಜ್ಯ ಮಾದಕ ದ್ರವ್ಯ ಕಾನೂನು ಜಾರಿ ಸಂಸ್ಥೆಗಳ ನಡುವೆ ಉತ್ತಮ ಒಗ್ಗಟ್ಟು ಮತ್ತು ಹೊಂದಾಣಿಕೆಗಾಗಿ 2019 ರಲ್ಲಿ ನಾಲ್ಕು ಹಂತದ ಓಅಔಖಆ ಕಾರ್ಯವಿಧಾನವನ್ನು ಬಲಪಡಿಸಲಾಯಿತು.

ಮೋದಿ ಸರಕಾರದಲ್ಲಿ, ಮಾದಕ ವ್ಯಸನ ಮುಕ್ತ ನವ ಭಾರತ ನಿರ್ಮಾಣಕ್ಕೆ ಅಮಿತ್ ಶಾ ಅವರ ತಂತ್ರಗಾರಿಕೆಗಳು ಫಲ ನೀಡುತ್ತಿರುವುದಕ್ಕೆ ಕೇವಲ ನಮ್ಮ ದೇಶವಲ್ಲದೇ ಜಗತ್ತಿನಾದ್ಯಂತದ ಜನರು ಸಾಕ್ಷಿಯಾಗಿದ್ದಾರೆ.

## ಗ್ಯಾರಂಟಿ ಯೋಜನೆ ಜನರಿಗೆ ವರದಾನ



ಹೊಸಪೇಟೆ(ವಿಜಯನಗರ): ರಾಜ್ಯ ಸರ್ಕಾರದ ಮಹತ್ವದ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ ಮತ್ತು ಯುವನಿಧಿ ಸೇರಿದಂತೆ ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಅರಿವು ಮೂಡಿಸಲು ವಾರ್ತಾ ಇಲಾಖೆಯಿಂದ ಕೇಂದ್ರ ಬಸ್ ನಿಲ್ದಾಣದಲ್ಲಿ ನಿರ್ಮಿಸಿದ ವಸ್ತು ಪ್ರದರ್ಶನ ಮಳಿಗೆಯನ್ನು ಸೋಮವಾರ ಶಾಸಕ ಎಚ್.ಆರ್. ಗವಿಯಪ್ಪ ಅವರು ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ರಾಜ್ಯ ಸರ್ಕಾರವು ಜಾರಿ ಮಾಡಿದ ಅನ್ನಭಾಗ್ಯ ಯೋಜನೆಯಿಂದ ಕಡು ಬಡವರು, ಕೃಷಿ ಕೂಲಿಕಾರ್ಮಿಕರಿಗೆ ಸಾಕಷ್ಟು ಅನುಕೂಲವಾಗಿದೆ. ಅಲ್ಲದೆ ಗೃಹಲಕ್ಷ್ಮಿ ಯೋಜನೆಯಿಂದಾಗಿ ಮಹಿಳೆಯರಿಗೆ ಪ್ರತಿ ತಿಂಗಳು ರೂ 2 ಸಾವಿರ ಸಿಗುತ್ತಿದೆ. ಜೊತೆಗೆ ಗೃಹಜ್ಯೋತಿ ಯೋಜನೆ ಮತ್ತು ಯುವನಿಧಿ ಯೋಜನೆಯಿಂದ ಸಾಕಷ್ಟು ಜನರಿಗೆ ಅನುಕೂಲವಾಗಿದೆ ಎಂದರು.

ಶಕ್ತಿ ಯೋಜನೆ ಜಾರಿಯಿಂದಾಗಿ ಜಿಲ್ಲೆಯ ಸಾರಿಗೆ ಇಲಾಖೆಯೊಂದಕ್ಕೆ ಪ್ರತಿ ತಿಂಗಳು ಕೋಟಿಗಟ್ಟಲೇ ಆದಾಯ ಬರುತ್ತಿದೆ. ಸಂಸ್ಥೆ ಮೊದಲಿಗಿಂತ ಹೆಚ್ಚಿನ ರೀತಿಯಲ್ಲಿ ಬಲವರ್ಧನೆಯಾಗಿದೆ ಎಂದು ಇಲಾಖೆಯ ಅಧಿಕಾರಿಗಳೇ ತಿಳಿಸಿದ್ದು, ಈ ಯೋಜನೆ ಜನಮೆಚ್ಚುಗೆ ಗಳಿಸಿದೆ ಎಂದರು.

ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ವಿ.ಎಸ್.ಜಗದೀಶ, ಜಿಲ್ಲಾ ವಾರ್ತಾಧಿಕಾರಿ ಗವಿಸಿದ್ದಪ್ಪ ಹೊಸಮನಿ, ಕೆ.ರಾಮಾಂಜನೇಯ, ಮುಖಂಡರಾದ ಬಸವರಾಜ ಎಸ್.ಪಿ., ಕಾರಪುಡಿ ಮಹೇಶ, ಮುನ್ನಿ, ಯೋಗಲಕ್ಷ್ಮಿ, ಬಡಾವಲಿ, ರಾಮನಗೌಡ್ರ, ಅಂಜನಪ್ಪ, ಹುಲಗಪ್ಪ, ಗಿಂಜಿ ಮಂಜುನಾಥ ಇದ್ದರು.

## ಪದವಿ ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ಎರಡನೇ ಘಟಿಕೋತ್ಸವ ಆಯೋಜನೆ: ಡಾ.ಎಸ್.ವಿದ್ಯಾಶಂಕರ

ಬೆಳಗಾವಿ: ಉನ್ನತ ವ್ಯಾಸಂಗದ ಜೊತೆಗೆ ಔದ್ಯೋಗಿಕ ಕ್ಷೇತ್ರದಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಪದವೀಧರರಿಗೆ ಪದವಿ ಪ್ರಮಾಣ ಪತ್ರಗಳನ್ನು ನೀಡುವಲ್ಲಿ ವಿಳಂಭವನ್ನು ತಪ್ಪಿಸುವ ಸದುದ್ದೇಶದೊಂದಿಗೆ ವಿಶ್ವವಿದ್ಯಾಲಯದ 23ನೇ ಘಟಿಕೋತ್ಸವ ಭಾಗ–2ನ್ನು ಮಾ.7 ರಂದು ಆಯೋಜಿಸಲಾಗಿದೆ ಎಂದು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ. ಎಸ್.ವಿದ್ಯಾಶಂಕರ ನುಡಿದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸೆನೆಟ್ ಹಾಲನಲ್ಲಿ ಮಂಗಳವಾರ (ಮಾ.5) ಜರುಗಿದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮಾರ್ಚ 7 ರಂದು ಜರುಗಲಿರುವ 23ನೇ ಘಟಿಕೋತ್ಸವ ಭಾಗ–2 ಕಾರ್ಯಕ್ರಮಕ್ಕೆ ವಿಶ್ವವಿದ್ಯಾಲಯದ ಕುಲಾಧಿಪತಿಗಳು ಹಾಗೂ ರಾಜ್ಯಪಾಲರಾದ ಥಾವರಚಂದ್ ಗೆಹ್ಲೋಟ್, ರಾಜ್ಯ ಉನ್ನತ ಶಿಕ್ಷಣ ಸಚಿವರಾದ ಡಾ. ಎಂ.ಸಿ.ಸುಧಾಕರ ಅವರು ಆಗಮಿಸಿಲಿದ್ದು ರಾಮನ್ ಮಾಗ್ಸಸ್ಸೇ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಡಾ. ಹರೀಶ್ ಹಂದೆ ಅವರು ಘಟಿಕೋತ್ಸವದ ಭಾಷಣ ಮಾಡುವರು ಎಂದು ತಿಳಿಸಿದರು.

ಪದವಿ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ಪ್ರಸಕ್ತ ಸಾಲಿನಿಂದಲೇ 2ನೇ ಘಟಿಕೋತ್ಸವವನ್ನು ಆಯೋಜಿಸಲಾಗುತ್ತಿರುವದು ರಾಜ್ಯದಲ್ಲಿಯೇ ಪ್ರಥಮವಾಗಿದೆ. ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕಾಗಿ ಪ್ರಯತ್ನ ಪಡುವ ವಿದ್ಯಾರ್ಥಿಗಳ ಪ್ರವೇಶ ಪ್ರಕ್ರಿಯೆಯಲ್ಲಿ ಯಾವುದೇ ವಿಳಂಭ, ಅಡೆತಡೆಗಳನ್ನು ಎದುರಿಸಬಾರದು ಎಂಬ ಸದುದ್ದೇಶದೊಂದಿಗೆ ಅಂತರಾಷ್ಟ್ರೀಯ ಶೈಕ್ಷಣಿಕ ಕ್ಯಾಲೆಂಡರನೊಂದಿಗೆ ವಿ.ಟಿ.ಟಯು ಶೈಕ್ಷಣಿಕ ಕ್ಯಾಲೆಂಡರ್ ಅನ್ನು ಸರಿ ಹೊಂದುವಂತೆ ಮಾಡಿ ದಾಖಲೆ ಸಮಯದಲ್ಲಿ ಪರೀಕ್ಷಾ ಫಲಿತಾಂಶವನ್ನು ನೀಡಲಾಗುತ್ತಿದೆ.




ವಿಶ್ವವಿದ್ಯಾಲಯದ 23ನೇ ಘಟಿಕೋತ್ಸವ (ಭಾಗ–2) ಸಮಯದಲ್ಲಿ ಎಂ.ಬಿ.ಎ.4514, ಎಂ.ಸಿ.ಎ.4024, ಎಂ.ಟೆಕ್ 920, ಎಂ.ಆರ್ಚ 44, ಎಂ.ಪ್ಲಾನ್ 27, ಹಾಗೂ ಸಂಶೋಧನಾ ಪದವಿಗಳಾದ ಪಿ.ಎಚ್.ಡಿ 667, ಎಂ.ಎಸ್ಸಿ (ಎಂಜಿನಿಯರಿಂಗ)–02, ಹಾಗೂ ಇಂಟಿಗ್ರೇಟೆಡ್ ಡುಯಲ್ ಡಿಗ್ರಿ ಟು ರಿಸರ್ಚ 2 ಪದವಿಗಳನ್ನು ನೀಡಲಾಗುತ್ತಿದೆ ಎಂದರು.

ಚಿನ್ನದ ಪದಕ ವಿಜೇತರು: ಬೆಂಗಳೂರಿನ ಆಯ್.ಸಿ.ಎಂ. ಆರ್ ಇನ್ಸಟಿಟ್ಯೂಟ್ನ ತನು ಜಿ 4, ಹುಬ್ಬಳ್ಳಿಯ ಕೆ.ಎಲ್.ಇ. ಇನ್ಸಟ್ಯೂಟ್ ಆಫ್ ಟೆಕ್ನಾಲಾಜಿಯ ಅಕ್ಷತಾ ಎಸ್. ನಾಯ್ಕ 3, ದಾವಣಗೆರೆಯ ಪೂಜಾ ಎಂ. –3, ಬೆಳಗಾವಿ ಎಸ್.ಜಿ.ಬಾಳೇಕುಂದ್ರಿ ಇನ್ಸಟಿಟ್ಯೂಟ್ ಆಫ್ ಟೆಕ್ನಾಲಾಜಿಯ ಕ್ರಾಂತಿ ಉತ್ತಮ ಮೋರೆ–2, ಚಿಕ್ಕಮಗಳೂರಿ ಆದಿಚುಂಚನಗಿರಿ ಇನ್ಸಟಿಟ್ಯೂಟ್ ಆಫ್ ಟೆಕ್ನಾಲಾಜಿಯ ಚೇತನ ಎಚ್.ಪಿ.,–2, ಹಾಗೂ ದಾವಣಗರೆಯ ಯು.ಬಿ.ಡಿ.ಟಿ ಕಾಲೇಜಿನ ನಿತ್ಯಾ ಎ.ಎಸ್–2 ಸೇರಿದಂತೆ ಒಟ್ಟು 16 ಚಿನ್ನದ ಪದಕಗಳನ್ನು ವಿತರಿಸಲಾಗುವುದು ಎಂದು ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ಕುಲ ಸಚಿವರುಗಳಾದ ಪ್ರೊ ಟಿ.ಎಸ್.ಶ್ರೀನಿವಾಸ, ಪ್ರೊ.ಬಿ.ಈ.ರಂಗಸ್ವಾಮಿ ಅವರುಗಳು ಉಪಸ್ಥಿತರಿದ್ದರು.

# ಹಸಿದ ಹೊಟ್ಟೆಗೆ ಅನ್ನ ಕೊಡುವ ಪುಣ್ಯದ ಕೆಲಸ ಕಾಂಗ್ರೆಸ್‌ನಿಂದ: ಲಕ್ಷ್ಮೀ ಹೆಬ್ಬಾಳಕರ್

ಹಿರೇಬಾಗೇವಾಡಿಯಲ್ಲಿ ನಡೆದ ಗ್ಯಾರಂಟಿ ಸಮಾವೇಶದಲ್ಲಿ ಸಚಿವರ ಮಾತು

ಬೆಳಗಾವಿ: ಬಿಜೆಪಿಯವರು ಕೊಳ್ಳೆ ಹೊಡೆದು ಬಿಟ್ಟು ಹೋಗಿದ್ದ ರಾಜ್ಯದಲ್ಲಿ ಎಲ್ಲವನ್ನೂ ಸರಿಪಡಿಸಿ, ಹಸಿದ ಹೊಟ್ಟೆಗಳಿಗೆ ಅನ್ನ ನೀಡುವ ಪುಣ್ಯದ ಕೆಲಸವನ್ನು ಕಾಂಗ್ರೆಸ್ ಸರಕಾರ ಮಾಡುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಹಿರೇಬಾಗೇವಾಡಿ ಗ್ರಾಮದಲ್ಲಿ ಮಂಗಳವಾರ, ತಾಲೂಕು ಆಡಳಿತ, ತಾಲೂಕು ಪಂಚಾಯತ ಬೆಳಗಾವಿ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಹಮ್ಮಿಕೊಂಡಿರುವ ಹೋಬಳಿ ಮಟ್ಟದ ಗ್ಯಾರಂಟಿ ಯೋಜನೆಗಳ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಬಿಜೆಪಿಯವರು ಸಾಕಷ್ಟು ಭ್ರಷ್ಟಾಚಾರ ಮಾಡಿ, ಬಜೆಟ್ ಇಲ್ಲದಿದ್ದರೂ ಮನಬಂದಂತೆ ಕೆಲಸದ ಆದೇಶ ನೀಡಿ ಎಲ್ಲವನ್ನೂ ಕೊಳ್ಳೆ ಹೊಡೆದು ಹೋಗಿದ್ದರು. ನಾವು ಎಲ್ಲವನ್ನೂ ಸರಿಪಡಿಸುವ ಜೊತೆಗೆ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾ-ರಿಗೊಳಿಸಿದೆವು. ಈಗ ಅವರು ಗ್ಯಾರಂಟಿಯಿಂದ ರಾಜ್ಯ ದಿವಾಳಿಯಾಗಿದೆ ಎನ್ನುತ್ತಾರೆ. ಜನರಿಗೆ ಕೊಡುವುದು ಅವರಿಗೆ ಬೇಕಾಗಿಲ್ಲ. ಒಂದು ಲೋಟ ನೀರು ಕೊಡಲು ಹಿಂದೆ ಮುಂದೆ ನೋಡುವಂತಹ ಇಂತಿನ ಪರಿಸ್ಥಿತಿಯಲ್ಲಿ ಇಂತಹ ಗ್ಯಾರಂಟಿ ಯೋಜನೆಗಳನ್ನು ನೀಡುವ ಪುಣ್ಯದ ಕೆಲಸವನ್ನು ಸರಕಾರ ಮಾಡುತ್ತಿದೆ ಎಂದು ಹೆಬ್ಬಾಳಕರ್ ಹೇಳಿದರು.

ಗ್ಯಾರಂಟಿ ಯೋಜನೆಗಳು ಎಷ್ಟು ಜನರಿಗೆ ತಲುಪಿಲ್ಲ, ಅದಕ್ಕೆ ಕಾರಣವೇನು ಎನ್ನುವ ಕು-ರಿತು ಪರಾಮರ್ಶೆ ನಡೆಸಲು ಈ ಸಮಾವೇಶ ಆಯೋಜಿಸಲಾಗಿದೆ.

ಅಂಗನವಾಡಿ, ಆಸಾ ಕಾರ್ಯಕರ್ತರನ್ನು ಮನೆ ಮನೆಗೆ ಕಳಿಸಿ ಯಾರಿಗೆ ಯೋಜನೆ ತಲುಪಿಲ್ಲ ಎನ್ನುವ ಕುರಿತು ಮಾಹಿತಿ



ಸಂಗ್ರಹಿಸಲಾಗುತ್ತಿದೆ. ಆದಷ್ಟು ಬೇಗ ಎಲ್ಲ ನ್ಯೂನ್ಯತೆಗಳನ್ನು ಸರಿಪಡಿಸಲಾಗುವುದು. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಾಗಲೆಲ್ಲ ಮಹಿಳಾ ಸಬಲೀಕರಣ, ರೈತರು, ಯುವಜನ-ರಿಗೆ ಪ್ರೋತ್ಸಾಹ ನೀಡುವ ಕೆಲಸ ಮಾಡುತ್ತಿದೆ. ಯಾವುದೇ ಕಾರಣದಿಂದಲೂ ಗ್ಯಾರಂಟಿ ಯೋಜನೆಗಳನ್ನು ಬಂದ್ ಮಾಡುವುದಿಲ್ಲ ಎಂದು ಲಕ್ಷ್ಮೀ ಹೆಬ್ಬಾಳಕರ್ ಸ್ಪಷ್ಟಪಡಿಸಿದರು.

ರಾಜ್ಯದಲ್ಲಿ ಬರಗಾಲ ಬಂದರೂ ಕೇಂದ್ರದಿಂದ ಒಂದು ಪೈಸೆಯನ್ನೂ ನೀಡಿಲ್ಲ. ರಾಜ್ಯದಲ್ಲಿ 25 ಬಿಜೆಪಿ ಸಂಸದರಿದ್ದಾರೆ. ಆದರೆ ಒಬ್ಬರೂ ಚಕಾರ ಎತ್ತಿಲ್ಲ.

ನಮ್ಮ ಗ್ಯಾರಂಟಿಯನ್ನು ಕಾಪಿ ಮಾಡಿ ಮೋದಿ ಗ್ಯಾರಂಟಿ ಎಂದು ಪ್ರಚಾರ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಈ ವೇಳೆ ಆಯೋಜಕರು ಸಚಿವರನ್ನು ಸನ್ಮಾನಿಸಲು ಮುಂದಾದಾಗ, ನನಗೆ ಸನ್ಮಾನ ಬೇಡ. ಜನರಿಂದಾಗಿ ನನಗೆ ಅಧಿಕಾರ ಬಂದಿದೆ, ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಜನರ ಖುಷಿಯೇ ನನ್ನ ಖುಷಿ ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಕಾಡಾ ಮಾಜಿ ಅಧ್ಯಕ್ಷ ಅಡಿವೇಶ ಇಟಗಿ ಮಾತನಾಡಿ, ಗ್ರಾಮೀಣ ಕ್ಷೇತ್ರದಲ್ಲಿ ಅಭಿವೃದ್ಧಿ ಎಂದರೆ ಏನೆಂದು ಗೊತ್ತಾಗಿದ್ದೇ ಲಕ್ಷ್ಮೀ ಹೆಬ್ಬಾಳಕರ್ ಶಾಸಕರಾದ ನಂತರ. ಕ್ಷೇತ್ರದ ಪಶ್ಚಿಮ ಭಾಗದಲ್ಲಂತೂ ಮಹಾರಾಷ್ಟ್ರ ಏಕೀಕರಣ ಸಮಿತಿಯ ಶಾಸಕರು ಯಾವುದೇ ಅಭಿವೃದ್ಧಿ ಕೆಲಸ ಮಾಡಿರಲಿಲ್ಲ ಎಂದು ಹೇಳಿದರು.

ಕೆಪಿಸಿಸಿ ಸದಸ್ಯ ಸುರೇಶ ಇಟಗಿ ಮಾತನಾಡಿ, ಲಕ್ಷ್ಮೀ ಹೆಬ್ಬಾಳಕರ್ ಶಾಸಕರಾಗುವ ಮೊದಲು ಅಭಿವೃದ್ಧಿ ಕೇವಲ ಪತ್ರಿಕೆಗಳಲ್ಲಿ ಮಾತ್ರ ಆಗುತ್ತಿತ್ತು, ಲಕ್ಷ್ಮೀ ಹೆಬ್ಬಾಳಕರ್ ಶಾಸಕರಾಗುವ ಮೊದಲೇ ಕ್ಷೇತ್ರದಲ್ಲಿ ಅಭಿವೃದ್ಧಿ ಆರಂಭಿಸಿದ್ದರು.

ಅವರು ಅಧಿಕಾರ ಇಲ್ಲದಿದ್ದಾಗ ಹೇಗಿದ್ದರೋ ಮಂತ್ರಿಯಾದ ಮೇಲೂ ಅದೇ ಸರಳತೆ ಉಳಿಸಿಕೊಂಡಿದ್ದಾರೆ ಎಂದರು.

ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಶಂಕರಗೌಡ ಪಾಟೀಲ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸ್ಮಿತಾ ಪಾಟೀಲ, ಸಿಡಿಪಿಓ ಸುಮಿತ್ರಾ ಮಾತನಾಡಿದರು.

ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಸಿ ಸಿ ಪಾಟೀಲ, ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್, ತಹಶಿಲ್ದಾರ ಸಿದ್ದರಾಯಿ ಬೋಸಗಿ, ತಾಲೂಕ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ರಾಮರೆಡ್ಡಿ ಪಾಟೀಲ, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ನಾಗರಾಜ, ಆಹಾರ ಇಲಾಖೆ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಹೆಸ್ಕಾಂ ಸಹಾಯಕ ಕಾರ್ಯನಿರ್ವಹಣಾಧಿಕಾರಿ ವಿನೋದ್ ಕೆರೂರ್, ಸುರೇಶ ಕಂಬಿ, ಅಪ್ಸರ್ ಜಮಾದಾರ, ಬಸವರಾಜ ಮ್ಯಾಗೋಟಿ, ಚಾರುಕೀರ್ತಿ ಸೈಬಣ್ಣವರ ಮಮೊದಲಾದವರು ಇದ್ದರು.

# ಪಾಕಿಸ್ತಾನ್ ಪರ ಘೋಷಣೆ ಕೂಗಿದ್ದ ಬಿಜೆಪಿ ಕಾರ್ಯಕರ್ತರ ಬಂಧನ

ಮಂಡ್ಯ: ಮಂಡ್ಯ ನಗರದ ಸಂ-ಜಯ್ ವೃತ್ತದಲ್ಲಿ ಪ್ರತಿಭಟನೆ ನಡೆಸುವಾಗ ಪಾಕಿಸ್ತಾನ್ ಪರ ಘೋಷಣೆ ಕೂಗಿದ್ದ ಬಿಜೆಪಿ ಕಾರ್ಯಕರ್ತರನ್ನು ಪಶ್ಚಿಮ ಪೊಲೀಸ್ ಠಾಣೆಯ ಪೊಲೀಸರು ಬಂಧಿಸಿ ಎಫ್‌ಐಆರ್ ದಾಖಲಿಸಿದ್ದು ಅವರನ್ನು ಕೋರ್ಟ್ ಎದುರು ಹಾಜರುಪಡಿಸಲಿದ್ದಾರೆ.

ಕನ್ನಂಬಾಡಿ ಕುಮಾರ್ ಹೆಸ-ರಿನ ವಕೀಲರೊಬ್ಬರು ಸಾಮಾಜಿ-ಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದ ವಿಡಿಯೋವೊಂದರ ಆಧಾರದ ಮೇಲೆ ದೂರು ದಾಖಲಿಸಿದ್ದಾರೆ. ಬಂಧಿತರನ್ನು ಢಣಾಯಕಪುರದ ರವಿ ಮತ್ತು ಆರಾಧ್ಯ ಎಂದು ಗುರುತಿಸಲಾಗಿದೆ. ಲಭ್ಯವಿರುವ ಮಾಹಿತಿಯ ಪ್ರಕಾರ ಬಿಜೆಪಿ ಕಾರ್ಯಕರ್ತರು ಪಾಕಿಸ್ತಾನದ ಅಂದಿನ ವಿದೇಶಾಂಗ ಸಚಿವನ ವಿರುದ್ಧ ಘೋಷನೆ ಕೂಗಿದ್ದರು. ಅದು ಸರಿ, ಪಾಕಿಸ್ತಾನದ ಸಚಿವನೊಬ್ಬನ ವಿರುದ್ಧ ಘೋಷಣೆ ಕೂಗುವಾಗ ಪಾಕಿಸ್ತಾನ್



ಜಿಂದಾಬಾದ್ ಅಂತ ಹೇಳಿದ್ದು ಯಾಕೆ ಅನ್ನುವ ಪ್ರಶ್ನೆ ಉದ್ಭವಿಸುತ್ತದೆ.

ಕಾರ್ಯಕರ್ತ ಹಾಗೆ ಕೂಗಿದಾಕ್ಷಣ ಅವರ ಹಿಂದೆ ನಿಂತಿದ್ದ ಕಾರ್ಯಕರ್ತನೊಬ್ಬ ಅವರ ಬಾಯಿ ಮುಚ್ಚುವುದನ್ನು ವಿಡಿಯೋದಲ್ಲಿ ನೋಡಬಹುದು. ಮತ್ತೊಂದು ಗಹನವಾದ ಸಂಗತಿ; ಈ ಘಟನೆ ನಡೆದಿದ್ದು ಡಿಸೆಂಬರ್ 2022ರಲ್ಲಿ, ಆಗ ಬಸವರಾಜ್ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ ಅಸ್ತಿತ್ವದಲ್ಲಿತ್ತು.

# ರಾಜ್ಯಸಭೆ ಸದಸ್ಯ ಸ್ಥಾನಕ್ಕೆ ಜೆ.ಪಿ. ನಡ್ಡಾ ರಾಜೀನಾಮೆ

ನವದೆಹಲಿ: ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ಮೇಲ್ಮನೆ ಸದಸ್ಯ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಕಳೆದ ತಿಂಗಳಷ್ಟೇ ಗುಜರಾತ್ ವಿಧಾನಸಭೆಯಿಂದ ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾಗಿದ್ದ ಅವರು ರಾಜೀನಾಮೆ ನೀಡಿರುವುದು ಚರ್ಚೆಗೆ ಕಾರಣವಾಗಿದೆ. ಮೊದಲಿನಿಂದಲೂ ಲೋಕಸಭೆ ಚುನಾವಣೆಯಲ್ಲಿ ಜೆ.ಪಿ. ನಡ್ಡಾ ಸ್ಪರ್ಧಿಸಲಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿದ್ದವು. ಆದರೆ, ಅವರು ರಾಜ್ಯಸಭೆಗೆ ಆಯ್ಕೆಯಾಗಿದ್ದರು. ಇದರ ಬೆನ್ನಲ್ಲೇ ರಾಜೀನಾಮೆ ನೀಡಿದ್ದಾರೆ.

"ಹಿಮಾಚಲ ಪ್ರದೇಶದ ವಿಧಾನಸಭೆಯಿಂದ ಆಯ್ಕೆಯಾಗಿದ್ದ ಜಗತ್ ಪ್ರಕಾಶ್ ನಡ್ಡಾ ಅವರು ರಾಜ್ಯಸಭೆ ಸದಸ್ಯ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಇವರ ರಾಜೀನಾಮೆಯನ್ನು ರಾಜ್ಯಸಭೆ ಸಭಾಪತಿಯು ಅಂಗೀಕ-ರಿಸಿದ್ದಾರೆ" ಎಂದು ರಾಜ್ಯಸಭೆ ಸಂಸದೀಯ ಪ್ರಕಟಣೆ ತಿಳಿಸಿದೆ. ಹಿಮಾಚಲ ಪ್ರದೇಶದಿಂದ ರಾಜ್ಯಸಭೆಗೆ ಆಯ್ಕೆಯಾಗಿರುವ ಜೆ.ಪಿ.



ನಡ್ಡಾ ಅವರ ಅವಧಿಯು ಏಪ್ರಿಲ್‌ನಲ್ಲಿ ಕೊನೆಗೊಳ್ಳಲಿದೆ. ಈಗಾಗಲೇ ಅವರು ಗುಜರಾತ್ ವಿಧಾನಸಭೆಯಿಂದ ಕಳೆದ ತಿಂಗಳು ಅವಿರೋಧವಾಗಿ ರಾಜ್ಯಸಭೆಗೆ ಆಯ್ಕೆಯಾಗಿದ್ದಾರೆ.

ಬಿಜೆಪಿಯು ಈಗಾಗಲೇ 195 ಅಭ್ಯರ್ಥಿಗಳ ಮೊದಲ ಪಟ್ಟಿ ಬಿಡುಗಡೆ ಮಾಡಿದೆ. ನರೇಂದ್ರ ಮೋದಿ, ಅಮಿತ್ ಶಾ ಸೇರಿ ಹಲವು ಗಣ್ಯರಿಗೆ, ಯುವಕರು, ಮಹಿಳೆಯರಿಗೆ ಆದ್ಯತೆ ಕೊಟ್ಟು ಟಿಕೆಟ್ ನೀಡಲಾಗಿದೆ.

ಟಿಕೆಟ್ ಘೋಷಿಸುವ ಮೊದಲೇ ಜೆ.ಪಿ. ನಡ್ಡಾ ಅವರು ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಲಿದ್ದಾರೆ ಎಂಬ ಮಾತುಗಳು ಕೇಳಿಬಂದಿದ್ದವು. ಆದರೆ, ಅವರು ರಾಜ್ಯಸಭೆಗೆ ಆಯ್ಕೆಯಾದ ಕಾರಣ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂಬುದು ಖಾತ್ರಿಯಾಗಿತ್ತು.

ಜೆ.ಪಿ. ನಡ್ಡಾ ಅವರು ತಮ್ಮ ರಾಜ್ಯಸಭೆ ಸದಸ್ಯತ್ವದ ಅವಧಿ ಮುಗಿಯುವ ಮೊದಲೇ ರಾಜ್ಯಸಭೆ ಸದಸ್ಯ ಸ್ಥಾನಕ್ಕೆ ರಾಜೀನಾಮೆ ನೀಡಿರುವುದೇ ಈಗ ಚರ್ಚೆಗೆ ಕಾರಣವಾಗಿದೆ. ಜೆ.ಪಿ. ನಡ್ಡಾ ಅವರಿಗೆ ಬಿಜೆಪಿಯ ಎರಡನೇ ಪಟ್ಟಿಯಲ್ಲಿ ಟಿಕೆಟ್ ನೀಡಲಾಗುತ್ತದೆ. ಅವರು ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸಲಿದ್ದಾರೆ. ಹಾಗಾಗಿಯೇ, ರಾಜೀನಾಮೆ ನೀಡಿದ್ದಾರೆ ಎಂದು ಹೇಳಲಾಗುತ್ತಿದೆ. ಆದರೆ, ಲೋಕಸಭೆ ಚುನಾವಣೆಗೆ ಸ್ಪರ್ಧಿಸುವುದಾದರೆ, ನಡ್ಡಾ ಅವರು ಯಾವ ಕ್ಷೇತ್ರದಿಂದ ಸ್ಪರ್ಧಿಸುತ್ತಾರೆ ಎಂಬುದು ಇದುವರೆಗೆ ದೃಢವಾಗಿಲ್ಲ.

# ಹೊನ್ನಮ್ಮ ಗವಿಮಠದ ಪ್ರಶಸ್ತಿಗೆ ಆಯ್ಕೆ: ಅಭಿನಂದನೆಗಳು



ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ತಾಲೂಕಿನ ಶಿವಗಂಗೆ ಕ್ಷೇತ್ರದ ಹೊನ್ನಮ್ಮ ಗವಿಮಠದ ವತಿಯಿಂದ ಕೊಡುವಂತಹ ಶ್ರೇಷ್ಠ ಸಾಧಕರ ಪ್ರಶಸ್ತಿಗೆ ಸುವರ್ಣ ಕರ್ನಾಟಕ ವೀರಶೈವ ಲಿಂಗಾಯಿತ ಮಹಾಸಭಾ ಸಂಸ್ಥಾಪಕರಾಧ್ಯಕ್ಷರು, ಮದರ್ ತೆರೆಸಾ ವಿದ್ಯಾ ಸಂಸ್ಥೆಯ ನಿರ್ದೇಶಕರು, ಸಂಯುಕ್ತ ಜನತಾದಳ ಜೆಡಿ(ಯು) ಪಕ್ಷದ ರಾಜ್ಯ ವಕ್ತಾರರು ಹಾಗೂ ನಮ್ಮ ಕನ್ನಡಿಗರ ವಿಜಯ ಸೇನೆಯ ರಾಜ್ಯ ಮುಖ್ಯ ಸಲಹೆಗಾರರು ಮೋಹನ್ ಕುಮಾರ್ ಬಸವರಾಜ್ ರವರಿಗೆ ವೀರಶೈವ ಲಿಂಗಾಯತ ಸಮಾಜಕ್ಕೆ ಮತ್ತು ಕನ್ನಡ ನಾಡು, ನುಡಿ, ನೆಲ, ಜಲ, ಭಾಷೆಯ ವಿಚಾರದಲ್ಲಿ ಹೋರಾಟ ಮಾಡಿರುವಂತಹ ಸೇವೆ ಸೇವೆಯನ್ನು ಗುರುತಿಸಿ ಹೊನ್ನಮ್ಮ ಗವಿಮಠದ ಪ್ರಶಸ್ತಿಗೆ ಆಯ್ಕೆಯಾಗಿರುತ್ತಾರೆ.

ಶ್ರೀಯುತರಿಗೆ ಮದರ್ ತೆರೆಸ ವಿದ್ಯಾ ಸಂಸ್ಥೆಯ ವತಿಯಿಂದ, ಸುವರ್ಣ ಕರ್ನಾಟಕ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ನಮ್ಮ ಕನ್ನಡಿಗರ ವಿಜಯ ಸೇನೆಯ ಸಮಸ್ತ ಪದಾಧಿಕಾರಿಗಳ ಪರವಾಗಿ ಹೃದಯಪೂರ್ವಕ ಅಭಿನಂದನೆಗಳು.

# ಗ್ರಾಮ ಸಹಾಯಕರ ವೇತನ ಹೆಚ್ಚಸಿ ಸರ್ಕಾರ ಆದೇಶ

ಬೆಂಗಳೂರು: ಕರ್ನಾಟಕ ಸರ್ಕಾರ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಣೆ ಮಾಡುವ ಗ್ರಾಮ ಸಹಾಯಕರ ವೇತನ ಹೆಚ್ಚಳ ಮಾಡಿ ಆದ-ೇಶ ಹೊರಡಿಸಿದೆ.

ಕೆಲವು ದಿನಗಳ ಹಿಂದೆ ಸಚಿವ ಕೃಷ್ಣ ಬೈರೇಗೌಡ ವೇತನ ಹೆಚ್ಚಳದ ಭರವಸೆ ನೀಡಿದ್ದರು.ಈ ಕುರಿತು ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ ಪ್ರದೀಪ್ ಕುಮಾರ್ ಬಿ. ಎಸ್. ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಸೇವೆಗಳು-2) ಆದೇಶ ಹೊರಡಿಸಿದ್ದಾರೆ.


ಕಂದಾಯ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಸಹಾಯಕರ ಮಾಸಿಕ ಮಿತ ವೇತನವನ್ನು ಹೆಚ್ಚಿಸುವ ಕುರಿತು ಎಂಬ ವಿಷಯವನ್ನು ಆದೇಶ ಒಳಗೊಂಡಿದೆ.

ವೇತನ ಎಷ್ಟು ಹೆಚ್ಚಳ: ಆದೇಶದಲ್ಲಿ ಕರ್ನಾಟಕ ಗ್ರಾಮ ಕಛೇರಿಗಳ ರದ್ದತಿ ಕಾಯ್ದೆ, 1961ರ ಜಾರಿಯಿಂದಾಗಿ ದಿನಾಂಕ 01/02/1963ರಿಂದ ಅನ್ವಯವಾಗುವಂತೆ ವಂಶಪಾರಂಪರ್ಯದ ಎಲ್ಲಾ ಗ್ರಾಮೀಣ ಹಂತದ ವಿಲೇಜ್ ಆಫೀಸರ್ಸ್ ಹುದ್ದೆಗಳು ರದ್ದಾದುದರಿಂದ, ಕೆಳಹಂತದ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ನೌಕರರನ್ನು ತಾತ್ಕಾಲಿಕ ಆಧಾರದ ಮೇಲೆ, ಯಾವುದೇ ವಂಶ ಪಾರಂಪರ್ಯ ಹಕ್ಕುಗಳು ಅನ್ವಯವಾಗದಂತೆ, ಆಡಳಿತಾತ್ಮಕ ಅನುಕೂಲಕ್ಕಾಗಿ ಕಂದಾಯ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮಲೆಕ್ಕಿಗರಿಗೆ ಸಹಾಯ ಮಾಡುವ ಸಲುವಾಗಿ ಗ್ರಾಮ ಸಹಾಯಕರ ಹುದ್ದೆಗಳನ್ನು ತಾತ್ಕಾಲಿಕವಾಗಿ ಮಂಜೂರು ಮಾಡಲಾಗಿದೆ.

ಸರ್ಕಾರಿ ಆದೇಶಗಳಲ್ಲಿ ಕ್ರಮವಾಗಿ 8,941 ಮತ್ತು 1,509 ಹೀಗೆ ಒಟ್ಟು 10,450 ಗ್ರಾಮ ಸಹಾಯಕರ ಹುದ್ದೆಗಳನ್ನು ಮಿತ ವೇತನದ ಆಧಾರದ ಮೇಲೆ ತಾತ್ಕಾಲಿಕವಾಗಿ ಮಂಜೂರು ಮಾಡಲಾಗಿದೆ.

ನಂತರದ ಸರ್ಕಾರಿ ಆದೇಶದಲ್ಲಿ ಸದರಿ 10,450 ಗ್ರಾಮ ಸಹಾಯಕರ ಹುದ್ದೆಗಳನ್ನು ಮಿತ ವೇತನದ ಆಧಾರದ ಮೇಲೆ ಖಾಯಂ ಆಗಿ ಮುಂದುವರಿಸಲಾಗಿದೆ ಎಂದು ಹೇಳಿದೆ.ಗ್ರಾಮ ಸಹಾಯಕರ ಮಾಸಿಕ ಮಿತ ವೇತನವನ್ನು ಕಾಲಕಾಲಕ್ಕೆ ಹೆಚ್ಚಳ ಮಾಡಲಾಗಿದ್ದು, ಸರ್ಕಾರಿ ಆದೇಶ ದಿನಾಂಕ 01/04/2022ರಿಂದ ಅನ್ವಯಿಸುವಂತೆ ರೂ.12,000 ಗಳಿಂದ ರೂ.13,000ಗಳಿಗೆ ಹೆಚ್ಚಿ ಸಲಾಗಿದೆ.

ಕಂದಾಯ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಸಹಾಯಕರ ಮಾಸಿಕ ಮಿತ ವೇತನವನ್ನು ದಿನಾಂಕ: 01/04/2024 ರಿಂದ ಅನ್ವಯವಾಗುವಂತೆ ಮಾಸಿಕ ರೂ. 13,000 ಗಳಿಂದ ರೂ.15,000ಗಳಿಗೆ ಹೆಚ್ಚಿಸಲು ಸರ್ಕಾರವು ನಿರ್ಣಯಿಸಿ, ಈ ಆದೇಶ ಹೊರಡಿಸಿದೆ.ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕಂದಾಯ ಇಲಾಖೆಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ 9903 ಗ್ರಾಮ ಸಹಾಯಕರ ಮಾಸಿಕ ಮಿತ ವೇತನವನ್ನು ದಿನಾಂಕ 01/04/2024ರಿಂದ ಅನ್ವಯವಾಗುವಂತೆ ಮಾಸಿಕ ರೂ. 13,000 ಗಳಿಂದ ರೂ.15,000ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.



# ಅಂಗನವಾಡಿ ಕೇಂದ್ರ ಉದ್ಘಾಟಿಸಿದ ಶಾಸಕ ಬಾಬಾಸಾಹೇಬ ಪಾಟೀಲ

ಚನ್ನಮ್ಮನ ಕಿತ್ತೂರು: ಪೇಠೆಯಲ್ಲಿರುವ ಪಟ್ಟಣ ಪಂಚಾಯತ ಹತ್ತಿರ ನೂತನ 194 ನೇಯ ನಂಬರಿನ ಅಂಗನವಾಡಿ ಕಟ್ಟಡದ ಉದ್ಘಾಟನೆಯನ್ನು ಶಾಸಕ ಬಾಬಾಸಾಹೇಬ ಪಾಟೀಲ ನೆರವೇರಿಸಿದರು.

ನಂತರ ಮಾತನಾಡಿದ ಅವರು, ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ಕಲಿಸಬೇಕು. ಕಲಿಸುವುದರಿಂದ ಮಕ್ಕಳು ಭವಿಷ್ಯದಲ್ಲಿ ಉತ್ತಮ ವ್ಯಕ್ತಿಗಳಾಗಿ ರೂಪಗೊಳ್ಳುತ್ತಾರೆ ಎಂದ ಅವರು ಸರ್ಕಾರದಿಂದ ಅಂಗನವಾಡಿಗಳಲ್ಲಿ ಮಕ್ಕಳಿಗೆ ಪೌಷ್ಠಿಕ ಆಹಾರದ ಜೊತೆ ಉತ್ತಮವಾದ ಶಿಕ್ಷಣ ನೀಡುತ್ತಾರೆ. ಕಾರಣ ತಮ್ಮ ತಮ್ಮ ಮಕ್ಕಳನ್ನು ಸರ್ಕಾರಿ ಅಂಗನಾವಾಡಿಗಳಿಗೆ ಕಳಿಸಬೇಕು ಎಂದರು.

ಈ ವೇಳೆ ಸಿಡಿಪಿಓ ಅರುಣಕುಮಾರ, ಎಸಿಡಿಪಿಓ ದೀಪಾ ಹೆಬ್ಬಳ್ಳಿ, ಅಂಗನವಾಡಿ ಮೇಲ್ವಿಚಾರಕಿ ಗೀತಾ ಕಮತಗಿ, ಅಂಗನವಾಡಿ ಶಿಕ್ಷಕಿ ಯಶೋದಾ ಗೋಂದಳಿ, ಸಹಾಯಕಿ ರೂಪಾ ಲಂಗೋಟಿ, ಗುತ್ತಿಗೆದಾರ ರಾಜು ಜಾಂಗಟಿ, ಪ್ರವೀಣಗೌಡ ಚಿಕ್ಕನಗೌಡರ, ಅಸ್ಫಾಕ ಹವಾಲ್ದಾರ, ಕೃಷ್ಣಾ ಬಾಳೇಕುಂದರಗಿ, ಶಂಕರ ಬಡಿಗೇರ, ಉಮೇಶ ಹುಂಬಿ, ಈರಣ್ಣ ಅಕ್ಕಿ, ಮಂಜುನಾಥ ಗಂಗಪ್ಪನವರ, ಸುರೇಶ ಕಿತ್ತೂರು. ಆಕಾಶ ದಡ್ಡಿ, ಕುತಬು ನದೀಮುಲ್ಲಾ, ನಾಗರಾಜ ಅಸುಂಡಿ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಆರೋಗ್ಯ ಇಲಾಖೆ ಅಧಿಕಾ-ರಿಗಳು ಹಾಗೂ ಮಕ್ಕಳು ಸೇರಿದಂತೆ ಇತರರಿದ್ದರು.

# ಅಂಗಡಿ ಮುಂಗಟ್ಟುಗಳಲ್ಲಿ ಕನ್ನಡ ನಾಮಫಲಕ ಅಳವಡಿಕೆಗೆ ಎಚ್ಚರಿಕೆ



ಬೆಳಗಾವಿ: ನಗರದಲ್ಲಿ ವ್ಯಾಪಾರ ವಹಿವಾಟು ನಡೆಸುತ್ತಿರುವ ವಾಣಿಜ್ಯ ಹಾಗೂ ಅಂಗಡಿ ಮುಂಗಟ್ಟುಗಳ ನಾಮಫಲಕಗಳು ಕಡ್ಡಾಯವಾಗಿ ಶೇ. 60 ರಷ್ಟು ಕನ್ನಡದಲ್ಲಿರಬೇಕೆಂದು ಸರಕಾರದ ಆದೇಶದ ಗಡುವು ಮುಗಿದರೂ ಇಲ್ಲಿಯವರೆಗೂ ಕನ್ನಡ ನಾಮಫಲಕ ಅಳವಡಿಸಿದವರಿಗೆ ಮಂಗಳವಾರ ಇಲ್ಲಿನ ಕೆಪಿಟಿಸಿಎಲ್ ರಸ್ತೆಯಿಂದ ಜಾಗೃತಿ ಜಾಥಾ ನಡೆಸಿ ಎಚ್ಚರಿಕೆ ನೀಡಿದರು.

ಚನ್ನಮ್ಮ ವೃತ್ತದಲ್ಲಿ ಅಳವಡಿಸಲಾದ ಅನ್ಯ ಭಾಷೆಯ ಬ್ಯಾನರ್ ತೆರವು ಮಾಡಲು ಯತ್ನಿಸಿದ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿ, ಬಿಡುಗಡೆಗೊಳಿಸಿದರು. ಇದಕ್ಕೂ ಮುನ್ನ ಕಾರ್ಯಕರ್ತರು ಕೆಪಿಟಿಸಿಎಲ್ ರಸ್ತೆ ಮಾರ್ಗವಾಗಿ ಕೊಲ್ಲಾಪುರ ವೃತ್ತ, ಅಂಬೇಡ್ಕರ್ ರಸ್ತೆ ಮೂಲಕ ಚನ್ನಮ್ಮ ವೃತ್ತದವರೆಗೆ ಜಾಗೃತಿ ರ್ಯಾಲಿ ಮಾಡಿ, ರಾಜ್ಯ ಸರಕಾರ ಕಡ್ಡಾಯವಾಗಿ ಅಂಗಡಿ ಮುಂಗಟ್ಟುಗಳ ನಾಮಫಲಕ ಶೇ.60 ರಷ್ಟು ಕಡ್ಡಾಯದ ಗಡುವು ಮುಗಿದೆ. ಆದರೂ ನಗರದಲ್ಲಿ ಅನ್ಯ ಭಾಷೆಯ ನಾಮಫಲಕಗಳು ರಾರಾಜಿಸುತ್ತಿವೆ. ಸ್ವಯಂ ಪ್ರೇರಿತವಾಗಿ ಕನ್ನಡ ನಾಮಫಲಕಗಳನ್ನು ಅಂಗಡಿಕಾರರು ಅಳವಡಿಸದಿದ್ದರೆ ಆ ನಾಮಫಲಗಳನ್ನು ತೆರವುಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

# ಆಸ್ತಿಗಾಗಿ ಹೆತ್ತ ಅಪ್ಪ-ಅಮ್ಮನಿಗೆ ಥಳಿಸಿ, ಜಾಡಿಸಿ ಒದ್ದ ಕಟುಕ ಮಗ

ಆಂಧ್ರಪ್ರದೇಶ: ಆಸ್ತಿ ಕೊಡಲಿಲ್ಲ ಎಂದು ಹೆತ್ತ ಅಪ್ಪ ಅಮ್ಮನಿಗೆ ಮಗನೋರ್ವ ಥಳಿಸಿ, ಜಾಡಿಸಿ ಒದ್ದ ಅಮಾನವೀಯ ಘಟನೆ ಆಂಧ್ರಪ್ರದೇಶದಲ್ಲಿ ನಡೆದಿದೆ. ಸದ್ಯ, ಈ ವಿಡಿಯೋ ವೈರಲ್ ಆಗಿದ್ದು, ಪ್ರಪಂಚದಲ್ಲಿ ಇಂತಹ ಕೆಟ್ಟ ಮಕ್ಕಳು ಇರ್ತಾರಲ್ಲ..? ಎಂದು ನೆಟ್ಟಿಗರು ಆಕ್ರೋಶ ಹೊರ ಹಾಕಿದ್ದಾರೆ.

ಆಂಧ್ರಪ್ರದೇಶದ ಅನ್ನಮಯ್ಯ ಜಿಲ್ಲೆಯ ಮದನಪಲ್ಲಿಯಲ್ಲಿ ಈ ಘಟನೆ ನಡೆದಿದೆ. ಆಸ್ತಿ ವಿವಾದದ ಹಿನ್ನೆಲೆ ಶ್ರೀನಿವಾಸುಲು ರೆಡ್ಡಿ ತನ್ನ ವಯಸ್ಸಾದ ಪೋಷಕರಾದ



ವೆಂಕಟ ರಮಣ ರೆಡ್ಡಿ ಮತ್ತು ಲಕ್ಷ್ಮಮ್ಮ ಅವರ ಮೇಲೆ ಹಲ್ಲೆ ನಡೆಸಿದ ಆರೋಪದ ಮೇಲೆ ಬಂಧಿಸಲಾಗಿದೆ.

ವೀಡಿಯೊದಲ್ಲಿ ಈತ ತನ್ನ ತಾಯಿಯನ್ನು ಕೂದಲಿನಿಂದ ಎಳೆದುಕೊಂಡು, ಹೊಡೆಯುವುದು, ನಂತರ ಹತ್ತಿರದಲ್ಲೇ ಕುಳಿತಿದ್ದ ತಂದೆಗೆ ಕಪಾಳಮೋಕ್ಷ ಮಾಡುವುದು ಮತ್ತು ನಂತರ ತಾಯಿಯನ್ನು ಅನೇಕ ಬಾರಿ ಒದೆಯುತ್ತಾನೆ. ಈ ವಿಡಿಯೋವನ್ನು ಯಾರೋ ಪೊಲೀಸರಿಗೆ ತೋರಿಸಿದ್ದು, ನಂತರ ಮಗನನ್ನು ಪೊಲೀಸರು ಒದ್ದು ಜೈಲಿಗೆ ಹಾಕಿದ್ದಾರೆ. ಈ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ಭಾರಿ ಆಕ್ರೋಶಕ್ಕೆ ಕಾರಣವಾಗಿದೆ.

# ಇಸ್ರೇಲ್ನಲ್ಲಿ ಕ್ಷಿಪಣಿ ದಾಳಿ: ಭಾರತೀಯ ಪ್ರಜೆ ಸಾವು, ಇಬ್ಬರಿಗೆ ಗಾಯ

ಲೆಬನಾನ್: ಇಸ್ರೇಲ್ನ ಉತ್ತರ ಗಡಿ ಸಮುದಾಯ ಮಾರ್ಗಲಿಯಟ್ ಬಳಿಯ ತೋಟದ ಮೇಲೆ ಲೆಬನಾನ್ನಿಂದ ಹಾ-ರಿಸಲಾದ ಟ್ಯಾಂಕ್ ವಿರೋಧಿ ಕ್ಷಿಪಣಿಯಿಂದ ಸೋಮವಾರ ದಾಳಿ ನಡೆದಿದ್ದು, ಇದರ ಪರಿಣಾಮವಾಗಿ ಕೇರಳದ ಭಾರತೀಯ ಪ್ರಜೆಯೊಬ್ಬರು ಸಾವನ್ನಪ್ಪಿದ್ದಾರೆ ಮತ್ತು ಇತರ ಇಬ್ಬರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಸುದ್ದಿ ತಿಳಿಸಿದ್ದಾರೆ.

ಇಸ್ರೇಲ್ನ ಉತ್ತರದ ಗೆಲಿಲಿ ಪ್ರದೇಶದ ಮೊಶಾವ್ (ಸಾಮೂಹಿಕ ಕೃಷಿ ಸಮುದಾಯ) ಮಾರ್ಗಲಿಯಟ್ನ ತೋಟಕ್ಕೆ ಸೋಮವಾರ ಬೆಳಿಗ್ಗೆ 11 ಗಂಟೆ ಸುಮಾ-ರಿಗೆ ಕ್ಷಿಪಣಿ ಅಪ್ಪಳಿಸಿದೆ ಎಂದು ರಕ್ಷಣಾ



ಸೇವೆಗಳ ವಕ್ತಾರ ಮ್ಯಾಗೆನ್ ಡೇವಿಡ್ ಅಡೋಮ್ (ಎಂಡಿಎ) ಸುದ್ದಿ ಸಂಸ್ಥೆಗೆ ವರದಿ ಮಾಡಿದ್ದಾರೆ.

ಕೇರಳದ ಕೊಲ್ಲಂನ ಪಟ್ನಿಬಿನ್ ಮ್ಯಾಕ್ಸ್ವೆಲ್ ಕ್ಷಿಪಣಿ ದಾಳಿಯಲ್ಲಿ ಸಾವನ್ನಪ್ಪಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಅವರ ಮೃತ ದೇಹವನ್ನು ಜಿವ್ ಆಸ್ಪತ್ರೆಯಲ್ಲಿ ಗುರುತಿಸಲಾಗಿದೆ. ಬುಷ್-ಜೋಸೆಫ್ ಜಾರ್ಜ್ ಮತ್ತು ಪಾಲ್ ಮೆಲ್ವಿನ್ ಗಾಯಗೊಂಡಿದ್ದು, ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಮುಖ ಮತ್ತು ದೇಹದ ಮೇಲೆ ಗಾಯಗಳಾಗಿದ್ದ ಜಾರ್ಜ್ ಅವರನ್ನು ಪೆಟಾ ಟಿಕ್ವಾದ ಬೀಲಿನ್ಸನ್ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಅಲ್ಲಿ ಅವರು ಶಸ್ತ್ರಚಿಕಿತ್ಸೆಗೆ ಒಳಗಾಗಿದ್ದರು ಮತ್ತು ಪ್ರಸ್ತುತ ವೀಕ್ಷಣೆಯಲ್ಲಿ ಚೆನ್ನಾಗಿ ಚೇತ-ರಿಸಿಕೊಳ್ಳುತ್ತಿದ್ದಾರೆ. ಕೇರಳದ ಇಡುಕ್ಕಿ ಜಿಲ್ಲೆಯವರಾದ ಮೆಲ್ವಿನ್ ಅವರನ್ನು ಸಣ್ಣಪುಟ್ಟ ಗಾಯಗಳೊಂದಿಗೆ ಸಫೆಡ್ ನ ಜಿವ್ ಆಸ್ಪತ್ರೆಗೆ ದಾಖಲಿಸಲಾಗಿದೆ.

**ಪಟ್ಟಣ ಪಂಚಾಯತ ಕಾರ್ಯಾಲಯ, ಯಕ್ಸಂಬಾ**
ತಾ :ಚಿಕ್ಕೋಡಿ ಜಿ : ಬೆಳಗಾವಿ
ಕ್ರಸಂ:ಪ.ಪಂ.ಯ/ಟೆಂಡರ/ಎಸ್.ಎಫ್.ಸಿ.ವಿ/2023-24 ದಿನಾಂಕ:05-03-2024

**ಟೆಂಡರ ಪ್ರಕಟಣೆ (ಇ-ಪ್ರೋಕ್ಯುರಮೆಂಟ್ ಮುಖಾಂತರ)**

ಯಕ್ಸಂಬಾ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಎಸ್.ಎಫ್.ಸಿ ವಿಶೇಷ ಅನುದಾನದಡಿ ಈ ಕೆಳಗೆ ವಿವರಿಸಿದ ಕಾಮಗಾರಿಗಳಿಗೆ ಲೋಕೋಪಯೋಗಿ/ಪಂಚಾಯತರಾಜ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟ ಅರ್ಹ ಸಿವ್ಹಿಲ್ ಗುತ್ತಿಗೆದಾರರಿಂದ ಕೆಡಬ್ಲ್ಯೂ-1, ಕೆಡಬ್ಲ್ಯೂ-2 ರ ಪ್ರಕಾರ ಟೆಂಡರನ್ನು ಆಹ್ವಾನಿಸಲಾಗಿದೆ.
ಕಾಮಗಾರಿಗಳ ಅಂದಾಜು ಮೊತ್ತ ರೂ. 11.50 ರಿಂದ 45.0 ಲಕ್ಷವರೆಗೆ ಇರುತ್ತವೆ.
ಭರ್ತಿ ಮಾಡಿದ ಟೆಂಡರಗಳನ್ನು ಅಪ್‌ಲೋಡ್ ಮಾಡುವ ಕೊನೆಯ ದಿನಾಂಕ: 12/03/2024 ಸಾಯಂಕಾಲ 4.30 ಘಂಟೆಯವರೆಗೆ. ತಾಂತ್ರಿಕ ಟೆಂಡರಗಳನ್ನು ತೆರೆಯುವ ದಿನಾಂಕ: 14/03/2024 ರಂದು ಮದ್ಯಾಹ್ನ 11.00 ನಂತರ ತೆರೆಯಲಾಗುವುದು. ಆರ್ಥಿಕ ಟೆಂಡರಗಳನ್ನು ತೆರೆಯುವ ದಿನಾಂಕ:16/03/2024 ರಂದು ಮದ್ಯಾಹ್ನ 11.00 ನಂತರ ತೆರೆಯಲಾಗುವುದು. ಹೆಚ್ಚಿನ ಮಾಹಿತಿ ಕುರಿತು ಇ-ಪ್ರೊಕ್ಯರಮೆಂಟ್ ವೆಬ್‌ಸೈಟ್ https://kppp.karnataka.gov.in ಲಾಗಿನ್ ಆಗಿ, ಕಚೇರಿ ವೆಬಸೈಟ್ www.exambatown.mrc.gov.in ನಲ್ಲಿ ಅಥವಾ ಪಟ್ಟಣ ಪಂಚಾಯತ ಕಾರ್ಯಾಲಯವನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

ಸಹಿ/- ಮುಖ್ಯಾಧಿಕಾರಿ
ಪಟ್ಟಣ ಪಂಚಾಯತ ಯಕ್ಸಂಬಾ

ಸಹಿ/- ಆಡಳಿತಾಧಿಕಾರಿಗಳು
ಪಟ್ಟಣ ಪಂಚಾಯತ ಯಕ್ಸಂಬಾ

DIPR/BGM/RO-NO-1320/KSMCA/2023-24

# ಮೌಢ್ಯ ಮುಕ್ತ ಸಮಾಜಕ್ಕಾಗಿ ಕೈಜೋಡಿಸಿ: ಸಚಿವ ಸತೀಶ್ ಜಾರಕಿಹೊಳಿ

ಬೆಂಗಳೂರು: ಮೌಢ್ಯ ಮತ್ತು ಮೂಢನಂಬಿಕೆಗಳನ್ನು ತಡೆಯುವ ಕಾನೂನು ಇದ್ದರೂ ಅದನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ರಾಜಕೀಯ ಇಚ್ಛಾಶಕ್ತಿ ಅಗತ್ಯವಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘಹಮ್ಮಿಕೊಂಡಿದ್ದ 'ಮೌಢ್ಯ-ಮೂಢನಂಬಿಕೆ ಮತ್ತು ಮಾಧ್ಯಮ' ಎಂಬ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿ ಅವರು, ವಿಚಾರಧಾರೆಗಳ ಅಧ್ಯಯನ ಮೂಲಕ ವೈಚಾರಿಕತೆ ಬೆಳೆಸಿಕೊಂಡವರ ಮೇಲೆ ಯಾರೂ ಸವಾರಿ ಮಾಡಲು ಸಾಧ್ಯವಿಲ್ಲ ಎಂದಿದ್ದಾರೆ. ಸರ್ಕಾರ ಯಾವುದೇ ಕಾನೂನು ರೂಪಿಸಿದರು ಅದನ್ನು ಅನುಷ್ಠಾನಕ್ಕೆ ತರುವುದು ಕಾರ್ಯಾಂಗ. ಮೂಢನಂಬಿಕೆಗಳನ್ನು ತಡೆಯಲು ಹೊಸ ಕಾನೂನು ರೂಪಿಸುವ ಅಗತ್ಯವಿಲ್ಲ. ಇದು ಮುಖ್ಯಮಂತ್ರಿಯೊಬ್ಬರಿಂದ ಆಗುವಂತದ್ದಲ್ಲ ಎಂದು ಹೇಳಿದ್ದಾರೆ.

ಶಾಸಕರು, ಸಚಿವರು ಸೇರಿದಂತೆ ಎಲ್ಲರು ಇಚ್ಛಾಶಕ್ತಿಯಿಂದ ಕೈಜೋಡಿಸಿದರೆ, ಎಲ್ಲವೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಲು ಸಾಧ್ಯವಾಗುತ್ತದೆ. ಆದ-'ರೆ, ಅಂಥಹ ವಾತಾವರಣ ಇನ್ನೂ ನಮ್ಮಲ್ಲಿ ನಿರ್ಮಾಣವಾಗಿಲ್ಲ. ಅಂಬೇಡ್ಕರ್, ಬುದ್ಧ, ಬಸವಣ್ಣ ಅವರ ವಿಚಾರಧಾರೆಗಳು ನಮಗೆ ಬೆಳಕಾಗಬೇಕು. ಆ ಆದರ್ಶದ ಬೆಳಕಿನಲ್ಲಿ ಉತ್ತಮ ಸಮಾಜ ನಿರ್ಮಾಣ ಕಟ್ಟುವುದು ನಮ್ಮ ಕನಸಾಗಬೇಕು. ಈ ನಿಟ್ಟಿನಲ್ಲಿ ಮಾಧ್ಯಮವು ಸಕ್ರಿಯವಾಗಿ ಕೈ ಜೋಡಿಸಿದರೆ ಸಮಾಜವನ್ನು ಮೌಢ್ಯ ಮುಕ್ತ ಮಾಡಲು ಸುಲಭ ಸಾಧ್ಯ ಎಂದು ಜಾರಕಿಹೊಳಿ ಹೇಳಿದರು.

ಮೌಢ್ಯವನ್ನು ತೊಲಗಿಸಲು ಮಾಧ್ಯಮದ ಪಾತ್ರ ಬಹುಮುಖ್ಯ. ಮೌಢ್ಯ, ಮೂಢನಂಬಿಕೆಯನ್ನು ದೂರ ಮಾಡಲು ಮತ್ತು ಜನರಲ್ಲಿ ಜಾಗೃತಿ ಮೂಡಿಸಲು ಮಾನವ




ಬಂಧುತ್ವ ವೇದಿಕೆ ಮೂಲಕ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ದೆವ್ವವೂ ಇಲ್ಲ, ಪಿಶಾಚಿನೂ ಇಲ್ಲ: ನಾನು ಹಲವಾರು ಕೆಲಸಗಳನ್ನು ಸ್ಮಶಾನದಿಂದಲೇ ಪ್ರಾರಂಭಿಸಿದ್ದೇನೆ. ಸ್ಮಶಾನ ಎನ್ನುವುದು ಭಯ ಹುಟ್ಟಿಸುತ್ತದೆ ಎನ್ನುವುದು ಅವರವರ ನಂಬಿಕೆ. ಅಲ್ಲಿ ದೆವ್ವವೂ ಇಲ್ಲ, ಪಿಶಾಚಿನೂ ಇಲ್ಲ. ಎಲ್ಲವೂ ನಮ್ಮ ಮನೋ ಕಲ್ಪನೆ. ಒಳ್ಳೆಯ ಕೆಲಸ ಮಾಡಬೇಕು ಎನ್ನುವ ಇಚ್ಛಾಶಕ್ತಿ ಇದ್ದರೆ ಅದಕ್ಕೆ ಜಾಗ, ಘಳಿಗೆ ಮುಖ್ಯವಾಗುವುದಿಲ್ಲ ಎಂದಿದ್ದಾರೆ.

ಸಾವಿರ ಕೋಟಿ ರೂ. ಬಿಡುಗಡೆ: 1500 ನೇಮಕ: ಲೋಕೋಪಯೋಗಿ ಇಲಾಖೆಯಲ್ಲಿ ಮಹತ್ವದ ಬದಲಾವಣೆಗಳನ್ನು ತರಲಾಗಿದ್ದು, ಪಾರದರ್ಶಕತೆಗೆ ಆದ್ಯತೆ ನೀಡಲಾಗಿದೆ. ಬಾಕಿ ಇದ್ದ 1 ಸಾವಿರ ಕೋಟಿ ರೂ. ಬಿಲ್ ಬಿಡುಗಡೆ ಮಾಡಲಾಗಿದೆ. ಪ್ರತಿ 20 ಕಿ.ಮೀ.ಗೆ ಒಬ್ಬರಂತೆ ಒಟ್ಟು 1500 ಜನರನ್ನು ರಸ್ತೆ ನಿರ್ವಹಣೆ ನೋಡಿಕೊಳ್ಳಲು ನೇಮಕ ಮಾಡಿಕೊಳ್ಳಲಾಗುವುದು. ಇಂಜಿನೀಯರ್‌ಗಳಿಗೆ ತರಬೇತಿ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಕೆಯುಡಬ್ಲ್ಯೂಜೆ ಭವನಕ್ಕೆ ನೆರವು: ಬೆಂಗಳೂರಿನಲ್ಲಿ ಕೆಯುಡಬ್ಲ್ಯೂಜೆ ನಿರ್ಮಾಣ ಮಾಡಲಿರುವ ಪತ್ರಕರ್ತರ ಭವನಕ್ಕೆ ಲೋಕೋಪಯೋಗಿ ಇಲಾಖೆಯ ಮೂಲಕ ನೆರವು ನೀಡಲಾಗುವುದು. ಈಗಿರುವ ಕಚೇರಿ ಮತ್ತು ಸಭಾಂಗಣ ನವೀಕರಣ ಮಾಡಲು ಕೂಡಲೆ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವ ಸತೀಶ್ ಜಾರಕಿಹೊಳಿ ಅವರು ಭರವಸೆ ನೀಡಿದರು.

ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಮೂಡನಂಬಿಕೆಯ ವಿರುದ್ಧ ಸದಾ ಧ್ವನಿ ಎತ್ತುತ್ತಿರುವ ಸಚಿವ ಸತೀಶ್ ಜಾರಕಿಹೊಳಿ ಅವರ ನಡೆ ನಿಜಕ್ಕೂ ಶ್ಲಾಘನೀಯ. ಎಲ್ಲರಿಗಿಂತಲೂ ವಿಭಿನ್ನ ರಾಜ-ಕಾರಿಣಿ ಆಗಿದ್ದರೂ, ಈತನಕ ತಾವು ನಂಬಿದ ನೆಲೆಯಲ್ಲಿಯೇ ಹೆಜ್ಜೆ ಇಡುತ್ತಿರುವುದು ವಿಶೇಷವಾದದ್ದು ಎಂದರು.

ಸಂವಾದ ಕಾರ್ಯಕ್ರಮದಲ್ಲಿ ರಾಜ್ಯ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಕಾಸರಗೋಡು ಜಿಲ್ಲಾ ಘಟಕದ ಅಧ್ಯಕ್ಷ ಎ.ಆರ್.ಸುಬ್ಬಯ್ಯಕಟ್ಟೆ, ಕೊಚ್ಚಿನ್ ಕನ್ನಡ ಸಂಘದ ಅಧ್ಯಕ್ಷ ಶ್ರೀನಿವಾಸ್, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಸೋಮಶೇಖರ ಗಾಂಧಿ, ಬೆಂಗಳೂರು ನಗರ ಘಟಕದ ಪದಾಧಿಕಾರಿಗಳಾದ ನರೇಂದ್ರ ಪಾರೆಕಟ್, ಕೆ.ಎಂ. ಜಿಕ್ರಿಯಾ, ಶಿವರಾಜ್, ಕೆ.ವಿ. ಪರಮೇಶ್, ಕೆ.ಎಸ್.ಸ್ವಾಮಿ, ಬೀದರ್ ಘಟಕದ ಜಿಲ್ಲಾಧ್ಯಕ್ಷ ಡಿ.ಕೆ.ಗಣಪತಿ, ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ, ಅಪ್ಪುರಾವ್ ಸೌದಿ, ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ಅಧ್ಯಕ್ಷರಾದ ರೋಶಿನಿ ಗೌಡ ಮತ್ತಿತರರು ಭಾಗವಹಿಸಿದ್ದರು.

# ರನ್‌ಗಳ ಸುರಿಮಳೆ ಹರಿಸಿದ ಆರ್‌ಸಿಬಿ
## ಸ್ಮೃತಿ ಮಂದಾನಗೆ ಮನಸೋತ ಅಭಿಮಾನಿಗಳು

ಬೆಂಗಳೂರು: ಚಿನ್ನಸ್ವಾಮಿ ಮೈದಾನದಲ್ಲಿ ನಿನ್ನೆ ರನ್ಹೊಳೆಯೇ ಹರಿಯಿತು. 14 ಸಿಕ್ಸರ್, 42 ಬೌಂಡರಿ, 373 ರನ್ ಗೆ ಫ್ಯಾನ್ಸ್ ನಿನ್ನೆ ಭರ್ಜರಿ ಟ್ರೀಟ್ ಸಿಗ್ತು. ಮೈದಾನದಲ್ಲಿ ಬ್ಯಾಟರ್ಗಳು ಆರ್ಭಟಿಸುತ್ತಿದ್ರೆ ಸ್ಟ್ಯಾಂಡ್ನಲ್ಲಿ ಫ್ಯಾನ್ಸ್ ಹುಚ್ಚೆದ್ದು ಕುಣಿದಾಡಿದರು.

ಪಂದ್ಯದಲ್ಲಿ ಮೊದಲ ಬ್ಯಾಟಿಂಗ್ ಆರಂಭಿಸಿದ ರಾಯಲ್ಚಾಲೆಂಜರ್ಸ್ ಬೆಂಗಳೂರು ತಂಡ ಅಬ್ಬರದ ಆರಂಭ ಪಡೆದುಕೊಳ್ತು. ನಾಯಕಿ ಸ್ಮೃತಿ ಮಂದಾನ, ಸಬ್ಬಿನೇನಿ ಮೇಘನಾ ಹಾಫ್ ಸೆಂಚುರಿ ಜೊತೆಯಾಟವಾಡಿದ್ರು. 5 ಬೌಂಡರಿ ಸಿಡಿಸಿ ಅಬ್ಬರಿಸಿದ ಮೇಘನಾ 28 ರನ್ಗಳಿಸಿ ಔಟಾದ್ರು.

**ರನ್ ಹೊಳೆ ಹರಿಸಿದ ಸ್ಮೃತಿ ಮಂದಾನ-ಎಲಿಸ್ ಪೆರ್ರಿ..!**

ಬಳಿಕ 2 ವಿಕೆಟ್ಗೆ ಜೊತೆಯಾದ ಸ್ಮೃತಿ ಮಂದಾನ, ಎಲಿಸ್ ಪೆರ್ರಿ ಜೋಡಿ ಯುಪಿ ವಾರಿಯರ್ಸ್ನ ಬೌಲರ್ಗಳ ಮೇಲೆ ಸವಾರಿ ಮಾಡಿದ್ರು. ಬೌಂಡರಿ, ಸಿಕ್ಸರ್ಗಳ ಸುರಿಮಳೆ ಸುರಿಸಿ, ಚಿನ್ನಸ್ವಾಮಿ ಮೈದಾನದ ಅಷ್ಟ ದಿಕ್ಕುಗಳಿಗೆ ಬಾಲ್ನ ದರ್ಶನ ಮಾಡಿಸಿದ್ರು.



ಫ್ಯಾನ್ಸ್‌ಒನ್ ಮೋರ್ ಒನ್ ಮೋರ್ ಅಂತಿ-ದ್ರು.

**ಆರಂಭದಲ್ಲೇ ಚಾಲೆಂಜ್ ಮಾಡಿದ ವಾ-ರಿಯರ್ಸ್..!**

199 ರನ್ಗಳ ಬಿಗ್ ಟಾರ್ಗೆಟ್ ಬೆನ್ನತ್ತಿದ ಯುಪಿ ವಾರಿಯರ್ಸ್ ಅಬ್ಬರದ ಆರಂಭವನ್ನ ಪಡೆಯಿತು. ಅಲಿಸಾ ಹೀಲಿ, ಕಿರಣ್ ನವ್ಗಿರೆ ಅಬ್ಬರಿಸೋ ಸೂಚನೆ ನೀಡಿದ್ರು. ಆದ್ರೆ, ಸೋಫಿ ಡಿವೈನ್ ಇದಕ್ಕೆ ಅವಕಾಶ ನೀಡಲಿಲ್ಲ. ಕಿರಣ್ ನವ್ಗಿರೆಗೆ ಪೆವಿಲಿಯನ್ ದಾರಿ ತೋ-ರಿಸಿದ್ರು. 3ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಚಮಾರಿ ಅಟ್ಟಪಟ್ಟು ಅಲ್ಪ ಮೊತ್ತಕ್ಕೆ ಔಟಾದ್ರು. ಗ್ರೇಸ್ ಹ್ಯಾರೀಸ್, ಶ್ವೇತಾ ಸೆಹ್ರಾವತ್ ಕೂಡ ಬಂದಷ್ಟೇ ಬೇಗನೆ ಪೆವಿಲಿಯನ್ ಸೇರಿದ್ರು. ಅರ್ಧಶತ ಸಿಡಿಸಿ ಮಿಂಚಿದ ಅಲಿಸಾ ಹೀಲಿ 55 ರನ್ ಸಿಡಿಸಿ ಔಟಾದ್ರು.

**175 ರನ್ಗಳಿಗೆ ಯುಪಿ ಆಲೌಟ್, ಆರ್ಸಿಬಿಗೆ ಜಯ**

ಉತ್ತಮ ಆಟವಾಡಿದ ದೀಪ್ತಿ ಶರ್ಮಾ ಕೆಲ ಕಾಲ ಆರ್ಸಿಬಿ ತಂಡವನ್ನ ಕಾಡಿದ್ರು. 33 ರನ್ಗಳಿಸಿದ್ದಾಗ ಆಶಾ ಸೋಬಾನಾ ಔಟ್ ಮಾಡಿದ್ರು. ಕೊನೆಯವರೆಗೆ ಹೋರಾಡಿದ ಪೂನಮ್ಖೇಮ್ನರ್ ಅಜೇಯ 31 ರನ್ ಸಿಡಿಸಿದ್ರು. ಆದ್ರೆ, ತಂಡವನ್ನ ಗೆಲುವಿನ ದಡ ಸೇರಿಸಲಾಗಲಿಲ್ಲ. 8 ವಿಕೆಟ್ ಕಳೆದುಕೊಂಡ ಯುಪಿ, 175 ರನ್ಗಳಿಸಿತು. ಸತತ ಸೋಲುಗಳಿಂದ ಕಂಗಟ್ಟಿದ್ದ ಆರ್ಸಿಬಿ 23 ರನ್ಗಳ ಗೆಲುವು ದಾಖಲಿಸಿತು. ಗೆಲುವಿನ ಖುಷಿಯಲ್ಲಿ ಆರ್ಸಿಬಿ ಆಟಗಾರ್ತಿಯರು ಚಿನ್ನಸ್ವಾಮಿ ಮೈದಾನದ ಸುತ್ತ ಒಂದು ರೌಂಡ್ ಹೊಡೆದ್ರು. ನೆರೆದಿದ್ದ ರಾಯಲ್ ಅಭಿಮಾನಿಗಳಿಗೆ ಧನ್ಯವಾದ ಹೇಳಿದ್ರು.

## 15 ಲಕ್ಷ ರೂ. ಕ್ಯಾಮರಾಗಾಗಿ ಫೋಟೋಗ್ರಾಫರ್ ನ ಕೊಲೆ: ಆರೋಪಿಗಳ ಬಂಧನ



ವಿಶಾಖಪಟ್ಟಣಂ: ಮದುವೆ ಸಮಾರಂಭಗಳ ಫೋಟೋಗ್ರಾಫರ್ನ ಕತ್ತು ಹಿಸುಕಿ ಕೊಲೆ ಮಾಡಿರುವ ಘಟನೆ ವಿಶಾಖಪಟ್ಟಣಂನಲ್ಲಿ ನಡೆದಿದೆ.

ಪಿ ಸಾಯಿ ವಿಜಯ್ ಪವನ್ ಕಲ್ಯಾಣ್ ಕೊಲೆಯಾದ ವೃತ್ತಿಪರ ಫೋಟೋಗ್ರಾಫರ್. ಈತನ ಬಳಿಯಿದ್ದ 15 ಲಕ್ಷ ಮೌಲ್ಯದ ಕ್ಯಾಮರಾಗಾಗಿ ಕೊಲೆ ಮಾಡಲಾಗಿದೆ ಎಂದು ತನಿಖೆಯಿಂದ ತಿಳಿದುಬಂದಿದೆ. ಲೆದರ್ ಬೆಲ್ಟ್ನಿಂದ ಕತ್ತು ಹಿಸುಕಿ ಕೊಲೆ ಮಾಡಿ, ಮುಲಸ್ಥನಮ್ ಬಳಿಯ ಗೋಧಾವರಿ ದಡದಲ್ಲಿ ಶವವನ್ನು ಹೂಳಿದ್ದರು.

ಸಾಯಿ ವಿಜಯ್ಗೆ ರವುಲಪಲೆಮ್ನ 19 ವರ್ಷದ ಶಣ್ಮುಖ ತೇಜ ಎಂಬುವವರಿಂದ ಆನ್ಲೈನ್ ಮೂಲಕ ಫೋಟ್ರೋಗ್ರಫಿಗೆ ಆಹ್ವಾನ ಬಂದಿತ್ತು. ಅಂತೆಯೇ ಶಣ್ಮುಖ ರಾಜಮಹೇಂದ್ರವರಂ ರೈಲ್ವೇ ನಿಲ್ದಾಣದಲ್ಲಿ ಸಾಯಿ ವಿಜಯ್ನನ್ನು ಪಿಕ್ ಮಾಡಿದ್ದರು. ನಂತರ ತೇಜ್ ಅಂಡ್ ಗ್ಯಾಂಗ್ ಆತನ ಬಳಿಯಿದ್ದ ಕ್ಯಾಮೆರಗಾಗಿ ಕೊಲೆ ಮಾಡಿದ್ದರು. ಫೆಬ್ರವರಿ 26 ರಂದು ಕೊಲೆ ಮಾಡಿ ಶವವನ್ನು ಹೂಳಿ ಬಂದಿದ್ದರು.

ನಂತರ ಸಾಯಿ ವಿಜಯ್ ಪವನ್ ಕಲ್ಯಾಣ್ ಪೋಷಕರು, ಮಗ ನಾಪತ್ತೆ ಆಗಿರುವ ಬಗ್ಗೆ ಫೆಬ್ರವರಿ 29 ರಂದು ದೂರು ದಾಖಲಿಸುತ್ತಾರೆ. ಪೊಲೀಸರು ಇದೀಗ ಕೊಲೆಯ ರಹಸ್ಯವನ್ನು ಬೇಧಿಸಿದ್ದಾರೆ. ತೇಜ ಅಂಡ್ ಗ್ಯಾಂಗ್ ಅನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಸಾಯಿ ವಿಜಯ್ ಪವನ್ ಕಲ್ಯಾಣ್ ಅವರನ್ನು ಆನ್ಲೈನ್ ಮೂಲಕ ಸಂಪರ್ಕಿಸಿ ಈ ಪ್ಲಾನ್ ಮಾಡಿದ್ದರು ಎಂದು ತಿಳಿದುಬಂದಿದೆ. ಸುಮುಖ್ ತೇಜ್, ತಾನು ಮಾಡಿರುವ ತಪ್ಪನ್ನು ಪೊಲೀಸರ ಮುಂದೆ ಒಪ್ಪಿಕೊಂಡಿದ್ದಾನೆ.

## ಸಮೂಹ ನೃತ್ಯ ಸ್ಪರ್ಧೆ

ಹುಕ್ಕೇರಿ; ಮಹಿಳಾ ಕಲ್ಯಾಣ ಸಂಸ್ಥೆ, ಬೆಳಗಾವಿ ಹಾಗೂ ಜಯಭಾರತ ಫೌಂಢೇಶನ, ಬೆಳಗಾವಿ ಇವರ ಸಹಯೋಗದಲ್ಲಿ ಮಹಾಶಿವರಾತ್ರಿ ನಿಮಿತ್ಯ ಹಾಗೂ ಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಹುಕ್ಕೇರಿ ತಾಲೂಕಿನ ಯರಗಟ್ಟಿ ಗ್ರಾಮದ ಕರ್ನಾಟಕ ಪಬ್ಲಿಕ ಶಾಲೆಯ ಆವರಣದಲ್ಲಿ ಸಮುಹ ನೃತ್ಯ (ಜಾನಪದ ಕನ್ನಡ) ಸ್ಪರ್ಧೆಯನ್ನು ಶುಕ್ರವಾರ ಮಾರ್ಚ 08 ರಂದು ಸಾಯಂಕಾಲ 6.00 ಗಂಟೆಗೆ ಆಯೊಜಿಸಲಾಗಿದೆ. ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಥಮ ಸ್ಥಾನ ರೂ 15,001/–, ದ್ವಿತೀಯ ಸ್ಥಾನ ರೂ10,000/– ಹಾಗೂ ತೃತೀಯ ಸ್ಥಾನ ರೂ 5,001/– ನಗದು ಬಹುಮಾನ ಮತ್ತು ಪ್ರಮಾಣ ಪತ್ರ ನೀಡಲಾಗುವುದು.

ಭಾಗವಹಿಸಿದ ಪ್ರತಿಯೊಬ್ಬರಿಗೂ ಪ್ರಮಾಣ ಪತ್ರ ನೀಡಲಾಗುವುದು ಆಸಕ್ತರು ಮಂಗಳವಾರ ದಿನಾಂಕ 05–03–2024 ರ ಒಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು ಎಂದು ಗೌರವ ಕಾರ್ಯದರ್ಶಿಗಳು ಮಹಿಳಾ ಕಲ್ಯಾಣ ಸಂಸ್ಥೆ, ಬೆಳಗಾವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿ ಹಾಗೂ ಹೆಸರು ನೋಂದಾಯಿಸಲು 9590551177 ಸಂಪರ್ಕಿಸಿರಿ.

## ಇಂದು ಸುವರ್ಣ ಸೌಧ ಆವರಣದಲ್ಲಿ ರೈತರಿಗೆ ಕೃಷಿ ಸಲಕರಣೆಗಳ ವಿತರಣಾ ಕಾರ್ಯಕ್ರಮ

ಬೆಳಗಾವಿ: ಬೆಳಗಾವಿ ವಿಭಾಗದ ವ್ಯಾಪ್ತಿಯ ಜಿಲ್ಲೆಗಳ ರೈತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬುಧವಾರ(ಮಾ.6) ಮಧ್ಯಾಹ್ನ 3 ಗಂಟೆಗೆ ಸುವರ್ಣ ವಿಧಾನಸೌಧದ ಆವರಣದಲ್ಲಿ ಕೃಷಿ ಸಲಕರಣೆಗಳನ್ನು ವಿತರಿಸಲಿದ್ದಾರೆ. ವಿಭಾಗದ ವ್ಯಾಪ್ತಿಯ ಏಳು ಜಿಲ್ಲೆಯ 2500 ರೈತರಿಗೆ ಕೃಷಿ ಸಲಕರಣೆಗಳನ್ನು ವಿತ-ರಿಸಲಾಗುತ್ತಿದೆ.

ಕೂರಿಗೆ, ನೇಗಿಲು, ಟ್ರ್ಯಾಕ್ಟರ್, ಶುಗರ್ ಕೇನ್ ಹಾರ್ವೆಸ್ಟರ್, ಪವರ್ ಟಿಲ್ಲರ್, ರೋಟೋವೇಟರ್, ಹನಿ ಮತ್ತು ತುಂತುರು ನೀರಾವರಿ ಘಟಕದ ಸಲಕರಣೆಗಳನ್ನು ಕಾರ್ಯಕ್ರಮದಲ್ಲಿ ವಿತರಿಸಲಾಗುವುದು ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ ತಿಳಿಸಿದ್ದಾರೆ.

ಕೃಷಿ ಇಲಾಖೆಯ ಸಚಿವರಾದ ಎನ್.ಚಲುವರಾಯಸ್ವಾಮಿ, ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಇಲಾಖೆಯ ಸಚಿವರಾದ ಸತೀಶ್ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರು ಸೇರಿದಂತೆ ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಸುವರ್ಣ ವಿಧಾನಸೌಧದ ಆವರಣದಲ್ಲಿ ಭವ್ಯ ವೇದಿಕೆಯನ್ನು ನಿರ್ಮಾಣ ಮಾಡಲಾಗುತ್ತಿದ್ದು, ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಡೆಸಲು ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ಶಿವನಗೌಡ ಪಾಟೀಲ ಅವರು ತಿಳಿಸಿದ್ದಾರೆ.

# 40 ಮಂದಿ ವಕೀಲರ ವಿರುದ್ಧ ಕೇಸ್ ಪ್ರಕರಣ: ಪಿಎಸ್‌ಐ ಅಮಾನತು ಆದೇಶ ರದ್ದು

ರಾಮನಗರ: ರಾಮನಗರದಲ್ಲಿ 40 ವಕೀಲರ ವಿರುದ್ಧ ದೂರು ದಾಖಲಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಐಜೂರು ಠಾಣೆ ಕಖಖ ತನ್ವೀರ್ ಹುಸೇನ್ ಅಮಾನತು ಆದೇಶ ತೆರವು ಮಾಡಲಾಗಿದೆ.

ವಕೀಲರ ವಿರುದ್ಧ ಪಿಎಸ್‌ಐ ಕೇಸ್ ಹಾಕಿರುವುದರಲ್ಲಿ ಯಾವುದೇ ತಪ್ಪಿಲ್ಲವೆಂದು ಕ್ಲೀನ್ಚಿಟ್ ನೀಡಲಾಗಿದೆ. ಈ ಹಿನ್ನೆಲೆಯಲ್ಲಿ ಐಜೂರು ಠಾಣೆ ಕಖಖ ತನ್ವೀರ್ ಹುಸೇನ್ ಅಮಾನತು ರದ್ದುಗೊಳಿಸಿ ಕೇಂದ್ರ ವಲಯ ಐಜಿಪಿ ಡಾ.ಬಿ.ಆರ್.ರವಿಕಾಂತೇಗೌಡ ಆದ-'ೇಶ ಹೊರಡಿಸಿದ್ದಾರೆ. ಹೀಗಾಗಿ ಕಖಖ ತನ್ವೀರ್ ಹುಸೇನ್ ಅವರು ಕರ್ತವ್ಯಕ್ಕೆ ಹಾಜರಾಗಿದ್ದಾರೆ.

ವಕೀಲರ ವಿರುದ್ಧ ಪಿಎಸ್‌ಐ ಕೇಸ್ ಹಾಕಿದ್ದು ತಪ್ಪಿಲ್ಲವೆಂದು ವರದಿಯಲ್ಲಿ ಗೊತ್ತಾಗಿದೆ. ಪ್ರಕರಣದಲ್ಲಿ ಬಾಹ್ಯ ಒತ್ತಡವಿಲ್ಲದೆ ಕಖಖ ತನ್ವೀರ್ ಹುಸೇನ್ ತಮ್ಮ ಕರ್ತವ್ಯವನ್ನು ಸರಿಯಾಗಿ ನಿಭಾಯಿಸಿದ್ದಾರೆ. ಸಮುದಾಯದ ಪರ ಒಲವು ತೋರದೆ ಕಾರ್ಯನಿರ್ವಹಿಸಿದ್ದಾರೆಂದು ವರದಿಯಲ್ಲಿ ಉಲ್ಲೇಖವಾಗಿದೆ.

ರಾಜಕೀಯ ಸ್ವರೂಪ ಪಡೆದುಕೊಂಡಿದ್ದ ಪ್ರಕರಣ: ರಾಮನಗರದಲ್ಲಿ 40 ಮಂದಿ ವಕೀಲರ ವಿರುದ್ಧ ಪಿಎಸ್‌ಐ ತನ್ವೀರ್ ಎಫ್‌ಐಆರ್ ದಾಖಲಿಸಿದ್ದು ರಾಜ-ಕೀಯ ಆಯಾಮ ಪಡೆದುಕೊಂಡಿತ್ತು. ವಕೀಲರ ಪ್ರತಿಭಟನೆಗೆ ಬಿಜೆಪಿ, ಜೆಡಿ-ಎಸ್ ಬೆಂಬಲಿಸಿದ್ದವು. ರಾಮನಗರದ ಜಿಲ್ಲಾಧಿಕಾರಿ ಕಚೇರಿ ಮುಂದೆ ನಡೆದಿದ್ದ ವಕೀಲರ ಪ್ರತಿಟನಾ ಸ್ಥಳಕ್ಕೆ ಮಾಜಿ ಸಿಎಂ ಎಚ್ಡಿ ಕುಮಾರಸ್ವಾಮಿ ಹಾಗೂ ವಿಪಕ್ಷ ನಾಯಕ ಆರ್ ಅಶೋಕ್ ಭೇಟಿ ನೀಡಿ ಬೆಂಬಲಿಸಿದ್ದರು.

ಬಳಿಕ ಈ ಬಗ್ಗೆ ವಿಪಕ್ಷ ನಾಯಕರು ಬಜೆಟ್ ಅಧಿವೇಶನದಲ್ಲೂ ಪ್ರಸ್ತಾಪಿಸಿ ಪಿಎಸ್‌ಐ ಅಮಾನತಿಗೆ ಬಿಗಿಪಟ್ಟು



ಹಿಡಿದಿದ್ದರು. ಅಲ್ಲದೇ ಸದನದ ಬಾವಿಗಿಳಿದು ಧರಣಿ ನಡೆಸಿ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದ್ದರು. ವಕೀಲರ ಹೋರಾಟದಲ್ಲಿ ರಾಜಕೀಯ ತಿರುವು ಪಡೆದುಕೊಳ್ಳುವ ಮೂಲಕ ಆರೋಪ ಪ್ರತ್ಯಾರೋಪಗಳ ನಡುವೆ ಸರ್ಕಾರ ಪಿಎಸ್ ಐ ಸಸ್ಪೆಂಡ್ ಮಾಡುವ ಮೂಲಕ ಇಬ್ಬರ ನಡುವಿನ ಜಟಾಪಟಿಗೆ ಇತೀಶ್ರಿ ಹಾಡಿತ್ತು.

ಕಿಡಿ ಹೊತ್ತಿಸಿದ್ದ ಸಾಮಾಜಿಕ ಮಾಧ್ಯಮ ಪೋಸ್ಟ್: ಉತ್ತರ ಪ್ರದೇಶದ ಜ್ಞಾನವಾಪಿ ಮಸೀದಿ ನೆಲಮಾಳಿಗೆಯಲ್ಲಿ ಪೂಜೆ ಸಲ್ಲಿಸಲು ತೀಪು ನೀಡಿದ ವಾರಾಣಸಿ ಜಿಲ್ಲಾ ನ್ಯಾಯಾಲಯದ ನ್ಯಾಯಾಧೀಶರ ವಿರುದ್ಧ ಚಾಂದ್ ಪಾಷಾ ಎಂಬವರು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಒಂದನ್ನು ಪ್ರಕಟಿಸಿದ್ದರು.

ಫೆಬ್ರವರಿ 3ರಂದು ಈ ಪೋಸ್ಟ್ ಮಾಡಲಾಗಿತ್ತು. ಇದು ಸ್ಥಳೀಯ ಹಿಂದೂ ಪರ ಸಂಘಟನೆಗಳ ಮುಖಂಡರ ಕೆಂಗಣ್ಣಿಗೆ ಗುರಿಯಾಗಿ-ತ್ತು. ಪಾಷಾ ಪೋಸ್ಟ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದ ಹಿಂದೂ ಸಂಘಟನೆಗಳ ಮುಖಂಡರು, ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ವಕೀಲರ ಸಂಘವನ್ನು ಆಗ್ರಹಿಸಿದ್ದರು.

ಫೆಬ್ರವರಿ 4ರಂದು ಹಿಂದೂ ಸಂಘಟನೆಯೊಂದರ ಮುಖಂಡ ಶಿವಾನಂದ ಎಂಬವರು ಚಾಂದ್ ಪಾಷಾ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ವಕೀಲರ ಸಂಘಕ್ಕೆ ದೂರು ನೀಡಿದ್ದರು. ಈ ವಿಚಾರ ತಿಳಿಯುತ್ತಿದ್ದಂತೆಯೇ ಪಾಷಾ ಅವರ ಕೆಲವು ಮಂದಿ ಬೆಂಬಲಿಗರು ವಕೀಲರ ಸಂಘದ ಕಚೇರಿಗೆ ತೆರಳಿ ಅವರ ವಿರುದ್ಧ ಕ್ರಮ ಕೈಗೊಳ್ಳದಂತೆ ಮನವಿ ಮಾಡಲು ಮುಂದಾಗಿದ್ದರು. ಈ ಸಂದರ್ಭದಲ್ಲಿ ವಕೀಲರ ಸಂಘದ ಸುಮಾರು 11 ಮಂದಿ ವಕೀಲರು ತಮ್ಮ ಮೇಲೆ ಹಲ್ಲೆ ನಡೆಸಿದ್ದಲ್ಲದೆ, ನಿಂದನೆ ಮಾಡಿದ್ದಾರೆ ಎಂದು ಪಾಷಾ ಬೆಂಬಲಿಗರು ಆರೋಪಿಸಿದ್ದರು.

ಇಷ್ಟಕ್ಕೆ ಸುಮ್ಮನಾಗದ ಪಾಷಾ ಬೆಂಬಲಿಗರು ಪೊಲೀಸ್ ಠಾಣೆಗೆ ತೆರಳಿ ವಕೀಲರ ಸಂಘದ ವಿರುದ್ಧ ದೂರು ನೀಡಿದ್ದರು. ಇದನ್ನು ಸ್ವೀಕರಿಸಿದ ಪಿಎಸ್‌ಐ ತನ್ವೀರ್ 40 ಮಂದಿ ವಕೀಲರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದರು. ಇದು ವಕೀಲರ ಆಕ್ರೋಶಕ್ಕೆ ಕಾರಣವಾಗಿತ್ತು.

## ಜಿಲ್ಲಾಸ್ಪತ್ರೆಯಲ್ಲಿ ವೈದ್ಯರ ನಿರ್ಲಕ್ಷ್ಯ; ಬಾಣಂತಿ ಸಾವು

ಕೋಲಾರ: ವೈದ್ಯರ ನಿರ್ಲಕ್ಷಕ್ಕೆ ಬಾಣಂತಿ ಸಾವನ್ನಪ್ಪಿರುವ ಘಟನೆ ಕೋಲಾರ ಜಿಲ್ಲಾಸ್ಪತ್ರೆಯಲ್ಲಿ ನಡೆದಿದೆ. ಮೃತ ಮಹಿಳೆಯನ್ನು ಭವಾನಿ (26) ಎಂದು ಗುರುತಿಸಲಾಗಿದೆ.

ಬೆಳಗ್ಗೆ ಹೆರಿಗೆಗೆಂದು ಜಿಲ್ಲಾಸ್ಪತ್ರೆಗೆ ದಾಖಲಾಗಿದ್ದ ಭವಾನಿ ಸಂಜೆ ವೇಳೆಗೆ ಹೆಣ್ಣು ಮಗುವಿಗೆ ಜನ್ಮ ನೀಡಿದ್ದರು.



ಇಬ್ಬರು ಕ್ಷೇಮವಾಗಿದ್ದರು. ಆದರೆ ಮಧ್ಯರಾತ್ರಿ ವೇಳೆಗೆ ತೀವ್ರ ನೋವು ಕಾಣಿಸಿಕೊಂಡ ಹಿನ್ನಲೆ ವೈದ್ಯರು ಇಂಜೆಕ್ಷನ್ ನೀಡಿದ್ದಾರೆ. ಇದಾದ ನಂತರ ಆರೋಗ್ಯದಲ್ಲಿ ವ್ಯತ್ಯಾಸ ಉಂಟಾಗಿ ಭವಾನಿ ಕೊನೆಯುಸಿರೆಳೆದಿದ್ದಾರೆ.

ತೀವ್ರ ನೋವಿನಿಂದ ಬಳಲುತ್ತಿದ್ದ ಬಾಣಂತಿಗೆ ವೈದ್ಯರು ಇಂಜೆಕ್ಷನ್ ನೀಡಿದ ಸ್ವಲ್ಪ ಹೊತ್ತಿನ ನಂತರ ಬಾಣಂತಿ ಭವಾನಿ ಮೃತಪಟ್ಟಿದ್ದಾರೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ. ಈ ಕುರಿತು ಕುಟುಂಬಸ್ಥರು ಕೋಲಾರ ಜಿಲ್ಲಾಸ್ಪತ್ರೆ ವೈದ್ಯೆ ಡಾ. ಶಾಂತಾ ವಿರುದ್ಧ ಕೋಲಾರ ಟೌನ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪತ್ನಿ ಸಾವಿಗೆ ನ್ಯಾಯ ಬೇಕು ಎಂದು ಪತಿ ಗೋಪಾಲ್ ಸೇರಿದಂತೆ ಮೃತಳ ಕುಟುಂಬಸ್ಥರು ಮನವಿ ಮಾಡಿದ್ದಾರೆ.

## ಯುವ ಕಾಂಗ್ರೆಸ್ ಅಧ್ಯಕ್ಷ ಪ್ರಶಾಂತ್ ನಿಧನಕ್ಕೆ ಸಚಿವ ಸತೀಶ್ ಜಾರಕಿಹೊಳಿ ಕಂಬನಿ

ಬೆಳಗಾವಿ: ಕಾಗವಾಡ ಯುವ ಕಾಂಗ್ರೆಸ್ ಅಧ್ಯಕ್ಷರಾಗಿದ್ದ ಪ್ರಶಾಂತ ಅಪರಾಜ ಅಕಾಲಿಕ ಮರಣ ಹೊಂದಿದ್ದು, ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರು ಕಂಬನಿ ಮಿಡಿದ್ದಾರೆ.



ಈ ಕುರಿತು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ತಮ್ಮ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಪೋಸ್ಟ್ ಮಾಡಿದ್ದು.

ಬೆಳಗಾವಿ ಜಿಲ್ಲೆಯ ಕಾಗವಾಡ ಯುವ ಕಾಂಗ್ರೆಸ್ ಅಧ್ಯಕ್ಷರಾಗಿದ್ದ ಶ್ರೀ ಪ್ರಶಾಂತ ಅಪರಾಜ ಅವರ ಅಕಾಲಿಕ ನಿಧನದ ಸುದ್ದಿ ತಿಳಿದು ತೀವ್ರ ಬೇಸರವಾಗಿದೆ.ಅವರ ಕುಟುಂಬಕ್ಕೆ ದು:ಖ ಭರಿಸುವ ಶಕ್ತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಹೇಳಿದ್ದಾರೆ.

## ಹೆಂಡತಿ ಜತೆ ಮೊಬೈಲ್ ನಲ್ಲಿ ಮಾತನಾಡುವಾಗ ರೈಲಿಗೆ ಸಿಲುಕಿ ವ್ಯಕ್ತಿ ಸಾವು

ಮೈಸೂರು: ಹೆಂಡತಿ ಜತೆ ವಿಡಿಯೋ ಕಾಲ್ ನಲ್ಲಿ ಮಾತನಾಡುತ್ತಿದ್ದ ಸಂದರ್ಭ ರೈಲಿಗೆ ಸಿಲುಕಿ ವ್ಯಕ್ತಿ ಸಾವನನಪ್ಪಿರುವ ಘಟನೆ ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ದೊಡ ಕವಲಂದೆ ಗ್ರಾಮದಲ್ಲಿ ನಡೆದಿದೆ.



ಬಿಹಾರ ಮೂಲದ ಮನು ಕುಮಾರ್ (26) ಸಾವನ್ನಪ್ಪಿರುವ ದುರ್ದೈವಿಯಾಗಿದ್ದಾನೆ. ದೊಡ್ಡ ಕವಲಂದೆಯಲ್ಲಿ ಬಿಹಾರದ ಈ ವ್ಯಕ್ತಿ ಕಾರ್ಪೆಂಟರ್ ಆಗಿ ಕೆಲಸ ಮಾಡುತ್ತಿದ್ದ.ಈ ವೇಳೆ ರೈಲಿನಲ್ಲಿ ತೆರಳುತ್ತಿದ್ದಾಗ ವಿಡಿಯೋ ಕಾಲ್ ನಲ್ಲಿ ಮಾತನಾಡುತ್ತಾ ಬರುವಾಗ ದುರಂತ ಸಂಭವಿಸಿದೆ. ನಂಜನಗೂಡು ರೈಲ್ವೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಿದ್ಯಾರ್ಥಿಗಳು ಕಲಿಕೆಯ ಸಂಧರ್ಭದಲ್ಲೇ ತರಬೇತಿ ಪಡೆಯುವುದಕ್ಕೆ ಕೈಗಾರಿಕೋದ್ಯಮಿಗಳು ಕೈಜೋಡಿಸಿ: ಸಚಿವ ಡಾ. ಎಂ.ಸಿ ಸುಧಾಕರ್ ಕರೆ

ಬೆಂಗಳೂರು: ಉನ್ನತ ಶಿಕ್ಷಣ ಪಡೆದ ವಿದ್ಯಾರ್ಥಿಗಳಿಗೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ನಮ್ಮ ಇಲಾಖೆ ಮಹತ್ವದ ಹೆಜ್ಜೆ ಇಟ್ಟಿದೆ. ಉದ್ಯೋಗ ಸೃಷ್ಟಿ ಹಾಗೂ ವಿದ್ಯಾರ್ಥಿಗಳು ತಮ್ಮ ಕಲಿಕೆಯ ವೇಳೆಯಲ್ಲೇ ಉದ್ಯೋಗಾವಕಾಶಕ್ಕೆ ಸಜ್ಜಾಗುವಂತೆ ಮಾಡುವ ನಿಟ್ಟಿನಲ್ಲಿ ತರಬೇತಿ ನೀಡುವಂತಹ ಕಾರ್ಯದಲ್ಲಿ ರಾಜ್ಯದ ಕೈಗಾರಿಕೋದ್ಯಮಿಗಳು ಸರಕಾರದೊಂದಿಗೆ ಕೈಜೋಡಿಸಬೇಕು ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ ಸುಧಾಕರ್ ಕರೆ ನೀಡಿದರು.

ಎಫ್.ಕೆ.ಸಿ.ಸಿ.ಐ ನಲ್ಲಿ ಏರ್ಪಡಿಸಿದ್ದ "ಮಂಥನ" ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕೈಗಾ-ರಿಕೆಗಳಿಗೆ ಅವಶ್ಯಕವಿರುವ ಕೌಶಲ್ಯಾಧಾ-ರಿತ ಪಠ್ಯಕ್ರಮಗಳನ್ನು ಅಳವಡಿಸಿ ಕೊಳ್ಳಲು ಈಗಾಗಲೇ ನಿರ್ಧರಿಸಲಾಗಿದೆ. ಈ ನಿಟ್ಟಿನಲ್ಲಿ ವಾದ್ವಾನಿ ಫೌಂಡೇಶನ್, ಟೊಯೋಟಾ ಕಿರ್ಲೋಸ್ಕರ್, ಸೇರಿದಂತೆ ಹಲವಾರು ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ. ಕೈಗಾರಿಕೆಗಳು ಸಹಕಾರ ನೀಡಿದರೆ ಅವರಿಗೆ ಅಗತ್ಯವಿರುವಂತಹ ಕೌಶಲ್ಯಾಧಾರಿತ ಅನುಭವ ಹೊಂದಿದ ವಿದ್ಯಾರ್ಥಿಗಳನ್ನು ಉದ್ಯೋಗಿಯಾಗಿ ಸುಲಭವಾಗಿ ಪಡೆಯಬಹುದಾದ ವಿಸ್ತಾರವಾದ ಕಾರ್ಯಕ್ರಮಗಳನ್ನು ಸರಕಾರದ




ವತಿಯಿಂದ ಹಮ್ಮಿಕೊಂಡಿದ್ದೇವೆ ಎಂದರು.

ರಾಜ್ಯದ ಖಾಸಗಿ ಶಿಕ್ಷಣ ಸಂಸ್ಥೆಗಳು ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳ ನಡುವೆ ಸಾಕಷ್ಟು ವ್ಯತ್ಯಾಸಗಳಿವೆ. ಖಾಸಗಿ ಶಿಕ್ಷಣದಲ್ಲಿನ ಉದ್ಯೋಗಾವಕಾಶಗಳು ಸರ್ಕಾರಿ ಕಾಲೇಜಿನ ವಿದ್ಯಾರ್ಥಿಗಳಿಗೆ ಸಿಗುತ್ತಿಲ್ಲ.

ಈ ತಾರತಮ್ಯವನ್ನು ತಗೆದು ಹಾಕುವ ನಿಟ್ಟಿನಲ್ಲಿ ಸರ್ಕಾರಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳು ಹಾಗೂ ಸಾಮಾನ್ಯ ಪದವಿ ಕಾಲೇಜುಗಳನ್ನು ಉನ್ನತ ದರ್ಜೆಗೇರಿಸಲು ಸಜ್ಜಾಗಿದ್ದೇವೆ. ಕೈಗಾರಿಕೆಗಳಲ್ಲಿ ಕೆಲಸ ನೀಡುವಾಗ ಅನುಭವ ಕೇಳುತ್ತಾರೆ.

ಈ ಅನುಭವವನ್ನು ನಾವೀಗ ವಿದ್ಯಾರ್ಥಿ ದೆಸೆಯಲ್ಲೆ ಶಿಕ್ಷಣ ಮತ್ತು ಕೈಗಾ-ರಿಕೆಗಳೊಂದಿಗಿನ ಒಡಂಬಡಿಕೆಯೊಂದಿಗೆ ತರಬೇತಿಗೊಳಿಸಿ ಉದ್ಯೋಗ ಕಲ್ಪಿಸುವ ಉದ್ದೇಶ ಹೊಂದಲಾಗಿದೆ. ಈ ನಿಟ್ಟಿನಲ್ಲಿ ಕೈಗಾರಿಕೋದ್ಯಮಗಳು ಸರ್ಕಾರದೊಂದಿಗೆ ಕೈ ಜೋಡಿಸಬೇಕು.

ವಿದ್ಯಾರ್ಥಿಗಳಿಗೆ ತಮ್ಮ ಕೈಗಾರಿಕೆಗಳಲ್ಲಿ ತರಬೇತಿಗೆ ಅವಕಾಶ ಮಾಡಿಕೊಡಬೇಕು ಎಂದು ಸುಧಾಕರ್ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಎಫ್‌ಕೆಸಿಸಿಐ ಅಧ್ಯಕ್ಷರಾದ ರಮೇಶ್ ಚಂದ್ರ ಲಹೋಟಿ, ಮಂಥನ್ – 2024 ರ ಅಧ್ಯಕ್ಷರಾದ ಕೀರ್ತನ್ ಕುಮಾರ್ ಎಂ, ಉಪಾಧ್ಯಕ್ಷರಾದ ಉಮಾ ರೆಡ್ಡಿ, ಹಿರಿಯ ಉಪಾಧ್ಯಕ್ಷರಾದ ಎಂ. ಜಿ ಬಾಲಕೃಷ್ಣ ಸೇ-ರಿದಂತೆ ಹಲವರು ಉಪಸ್ಥಿತರಿದ್ದರು.

## ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಅಬಕಾರಿ ಅಕ್ರಮ ತಡೆಗಟ್ಟಲು ನಿಯಂತ್ರಣ ಕೊಠಡಿಗಳ ಸ್ಥಾಪನೆ

ಬೆಳಗಾವಿ: ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಮುಕ್ತ ಹಾಗೂ ನಿಷ್ಪಕ್ಷಪಾತ ಚುನಾವಣೆ ಜರುಗಿಸಲು ಅಬಕಾರಿ ಇಲಾಖೆ ವತಿಯಿಂದ ಅಬಕಾರಿ ಅಕ್ರಮಗಳನ್ನು ತಡೆಗಟ್ಟಿ ಶಾಂತಿಯುತ ಹಾಗೂ ಮುಕ್ತ ಹಾಗೂ ನ್ಯಾಯಯುತ ಚುನಾವಣೆ ಜರುಗಿಸುವ ನಿಟ್ಟಿನಲ್ಲಿ ಬೆಳಗಾವಿ ಉತ್ತರ ಜಿಲ್ಲಾ ವ್ಯಾಪ್ತಿಯಲ್ಲಿ ನಿಯಂತ್ರಣ ಕೊಠಡಿಗಳನ್ನು ತೆರೆಯಲಾಗಿದೆ.

ನಿಯಂತ್ರಣ ಕೊಠಡಿಗಳ ವಿವರ ಬೆಳಗಾವಿ ಉತ್ತರ ಜಿಲ್ಲೆ: 08338-275727/180004250136 (ಟೋಲ್ ಫ್ರೀ ನಂಬರ), 9449597077, 9448783883, 9731831108, 8217236934 ಚಿಕ್ಕೋಡಿ ಉಪವಿಭಾಗ: 08338-273367, 9449597076, 9986163111, 9448738261, ಅಥಣಿ ಉಪವಿಭಾಗ: 08289-295108, 9880606063, 9686128478, 7899475233 ಆಥಣಿ ವಲಯ: 08289-285210, 9902663478, 7829665903, ಚಿಕ್ಕೋಡಿ ವಲಯ: 08338-274765, 9036127800, 9448786110, 8722573613 ಗೋಕಾಕ ವಲಯ: 08332-229333, 9632537065, 9980182779, 7995569684 ಹುಕ್ಕೇರಿ ವಲಯ: 08333-274769, 9632009133, 9448535288, 9880181150 ರಾಯಬಾಗ ವಲಯ: 08331-225018, 8660337928, 9945626079, 9901538790. ಚುನಾವಣಾ ಸಂದರ್ಭದಲ್ಲಿ ಅಬಕಾರಿ ಅಕ್ರಮಗಳು ಕಂಡುಬಂದಲ್ಲಿ ಸಾರ್ವಜನಿಕರು ಸಹಾಯವಾಣಿ ಹಾಗೂ ದೂರವಾಣಿ ಸಂಖ್ಯೆಗಳಿಗೆ ಸಂಪರ್ಕಿಸಿ ದೂರುಗಳನ್ನು ನೀಡಬಹುದಾಗಿದೆ ಎಂದು ಅಬಕಾರಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಸಹಕಾರಿ ಸಂಘಗಳ ಗಮನಕೆ

ಬೆಳಗಾವಿ: ಕರ್ನಾಟಕ ಸಹಕಾರ ಸಂಘಗಳ ನಿಯಮಗಳ-ರೀತ್ಯ ಸೌಹಾರ್ದ ಸಹಕಾರಿಯ ಮುಖ್ಯಕಾರ್ಯನಿರ್ವಾಹಕರು ವಾರ್ಷಿಕ ಮಹಾನಭೆಯಲ್ಲಿ ಲೆಕ್ಕಪರಿಶೋಧಕರ ಅಥವಾ ಲೆಕ್ಕಪರಿಶೋಧನಾ ಫರ್ಮ್‌ನ್ನು ನೇಮಕ ಮಾಡಿಕೊಂಡ ಬಗ್ಗೆ ವಾರ್ಷಿಕ ಮಹಾಸಭೆಯ ದಿನಾಂಕದಿಂದ 07 ದಿನಗಳೊಳಗಾಗಿ ಇಲಾಖಾ ಲೆಕ್ಕಪರಿಶೋಧಕರಿಗೆ ಅಥವಾ ಸನ್ನದು ಲೆಕ್ಕಪರಿಶೋಧನ ಸಂಸ್ಥೆಗೆ ಮತ್ತು ಸಹಕಾರಿ ಲೆಕ್ಕಪ-ರಿಶೋಧನಾ ನಿರ್ದೇಶಕರಿಗೆ ತಿಳಿಸಬೇಕಾಗಿರುತ್ತದೆ.

ಜಿಲ್ಲೆಯಲ್ಲಿ ಇದುವರೆಗೆ ಮಾಹಿತಿಯನ್ನು ಸಲ್ಲಿಸದೆ ಇರುವ ಸಹಕಾರ ಸಂಘಗಳು ಈ ಪ್ರಕಟಣೆಯಾದ 7 ದಿನಗಳೊಳಗಾಗಿ ವಾರ್ಷಿಕ ಮಹಾಸಭೆಯಲ್ಲಿ ಇಲಾಖಾ ಲೆಕ್ಕಪರಿಶೋಧಕರನ್ನು/ ಸನ್ನದು ಲೆಕ್ಕಪ-ರಿಶೋಧನಾ ಸಂಸ್ಥೆಯನ್ನು ನೇಮಕಾತಿ ಮಾಡಿಕೊಂಡಿರುವ ಬಗ್ಗೆ ಮಾಹಿತಿಯನ್ನು ವಾರ್ಷಿಕ ಮಹಾಸಭೆಯ ನಡವಳಿಯೊಂದಿಗೆ ಜಂಟಿ ನಿರ್ದೇಶಕರ ಕಚೇರಿ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ, ಬೆಳಹಾವಿ ಜಿಲ್ಲೆ, ಬೆಳಗಾವಿ ಸುವರ್ಣ ವಿಧಾನ ಸೌಧ ಕೊಠಡಿ ಸಂಖ್ಯೆ 16,17 ದಕ್ಷಿಣದ್ವಾರ ಬೆಳಗಾವಿ-590020 ದೂರವಾಣಿ ಸಂಖ್ಯೆ 0831-2432579 ಜಟಚುಟ-ಜಜಭಿಚಿ-ಭಜಟರಚಿಣಟ-ಇಚಿ@ರಠಠ.ಛಿಟ ಕಚೇರಿಗೆ ಸಲ್ಲಿಸಬೇಕು. ಇಲ್ಲವಾದಲ್ಲಿ ಸಹಕಾರ ಸಂಘಗಳ ನಿಯಮಗಳಂತೆ ಸಂಘದ ಲೆಕ್ಕಪತ್ರಗಳ ಪರಿಶೋಧನೆಯನ್ನು ಮಾಡಲು ಲೆಕ್ಕಪರಿಶೋಧಕರನ್ನು ಇಲಾಖೆಯಿಂದ ನೇಮಕ ಮಾಡಲಾಗುವುದು ಎಂದು ಬೆಳಗಾವಿ ಜಿಲ್ಲೆ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಯಲ್ಲಮ್ಮ ದೇವಸ್ಥಾನದ ಅಭಿವೃದ್ಧಿಯ ಕಾಮಗಾರಿಯ ಶಂಕು ಸ್ಥಾಪನೆ

ಬೆಳಗಾವಿ: ಬೆಳಗಾವಿಯ ಜಿಲ್ಲಾಡಳಿತ ಮತ್ತು ಪ್ರವಾಸೋಧ್ಯಮ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಶ್ರೀ ರೇಣುಕಾ ಯಲ್ಲಮ್ಮ ದೇವಸ್ಥಾನದ ಅಭಿವೃದ್ಧಿಗಾಗಿ ಕೇಂದ್ರ ಪುರಸ್ಕೃತ ಪ್ರಸಾದ ಯೋಜನೆಯಡಿ ಮಂಜೂರಾದ ಕಾಮಗಾರಿಗಳ ಶಂಕುಸ್ಥಾಪನೆ ಸಮಾರಂಭವು ಮಾ.7 ರಂದು ಬೆಳಗ್ಗೆ 10.30 ಗಂಟೆಗೆ ಬೆಳಗಾವಿ ಜಿಲ್ಲೆಯ ಸವದತ್ತಿ ಶ್ರೀ ಕ್ಷೇತ್ರ ಯಲ್ಲಮ್ಮ ಗುಡ್ಡದಲ್ಲಿ ಹಮ್ಮಿಕೊಳ್ಳಲಾಗಿದೆ.

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ವರ್ಚುವಲ್ ಮುಖಾಂತರ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಕೇಂದ್ರ ಪ್ರವಾಸೋದ್ಯಮ ಸಚಿವರಾದ ಜಿ.ಕಿಶನ್ ರೆಡ್ಡಿ, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ, ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರಾದ ಎಚ್.ಕೆ. ಪಾಟೀಲ ಅವರು ಭಾಗವಹಿಸುವರು. ವಿಧಾನ ಸಭೆ ಶಾಸಕರಾದ ವಿಶ್ವಾಸ ವೈದ್ಯ ಅವರು ಅಧ್ಯಕ್ಷತೆ ವಹಿಸುವರು.

ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ನವದೆಹಲಿಯ ವಿಶೇಷ ಪ್ರತಿನಿಧಿ-2 ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರು ಭರಮಗೌಡ ಕಾಗೆ, ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ, ಜಿಲ್ಲಾ ಅಧಿಕಾರಿ ನಿತೇಶ್ ಪಾಟೀಲ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತ ಇರಲ್ಲಿದ್ದಾರೆ.

# ಜಿಲ್ಲಾಧಿಕಾರಿಗಳ ಜೊತೆ ಸಿಎಂ ವಿಡಿಯೋ ಸಂವಾದ




ಬೆಳಗಾವಿ: ಈ ಬಾರಿ ಬರಗಾಲ ಎದುರಾಗಿದೆ. ಹಿಂಗಾರು ಹಾಗೂ ಮುಂಗಾರು ಮಳೆ ಕೊರತೆಯಾಗಿ ಬರಗಾಲ ಪರಿಸ್ಥಿತಿ ಉದ್ಭವಿಸಿದೆ. ಜೂನ್ ಅಂತ್ಯದವರೆಗೆ ಬರ ನಿರ್ವಹಣೆಗೆ ಸೂಕ್ತ ಯೋಜನೆ ರೂಪಿಸಬೇಕು. ಕುಡಿಯುವ ನೀರು ಕೊರತೆ, ಬೆಳೆಹಾನಿ, ಮೇವು ಕೊರತೆ ಸೇರಿದಂತೆ ಇದುವರಗೆ ಆಗಿರುವ ಸಮಸ್ಯೆಗಳು ಮತ್ತು ಮುಂದೆ ಉಸ್ಭವಿಸಬಹುದಾದ ಸಮಸ್ಯೆಗಳ ನಿವಾರಣೆಗೆ ಈಗಲೇ ಸಿದ್ಧತೆ ಮಾಡಿಕೊಳ್ಳಬೇಕು.

ಕುಡಿಯುವ ನೀರು, ಬರ ನಿರ್ವಹಣೆ, ಕೃಷಿ, ಮೇವು ಹಾಗೂ ಉದ್ಯೋಗಕ್ಕೆ ಸಂಬಂಧಿಸಿದಂತೆ ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳೊಂದಿಗೆ ಮಂಗಳವಾರ(ಮಾ.5) ನಡೆದ ವಿಡಿಯೋ ಸಂವಾದದಲ್ಲಿ ಅವರು ಮಾತನಾಡಿದರು.

ಬರಗಾಲದಿಂದ 48 ಲಕ್ಷ ಹೆಕ್ಟೇರ್ ಬೆಳೆಹಾನಿಯಾಗಿದೆ. ಮಾರ್ಚ, ಏಪ್ರಿಲ್ ಹಾಗೂ ಮೇ ತಿಂಗಳುಗಳಲ್ಲಿ ಪರಿಸ್ಥಿತಿ ಗಂಭೀರವಾಗಲಿದೆ.ಪೂರ್ವ ಮುಂಗಾರು ಮಳೆ ಕೆಲವೆಡೆ ನಿರೀಕ್ಷಿಸಲಾಗಿದೆ. ಆದ-ಾಗ್ಯೂ ಪ್ರತಿಯೊಂದು ಜಿಲ್ಲೆಯ ಜಿಲ್ಲಾಧಿಕಾ-ರಿಗಳು ಮತ್ತು ಸಿಇಓ ಪರಿಸ್ಥಿತಿಯನ್ನು ಅವಲೋಕಿಸಿ ಸೂಕ್ತ ಯೋಜನೆ ರೂಪಿಸಬೇಕು. ಮಾಧ್ಯಮಗಳಲ್ಲಿ ಪ್ರಕಟವಾಗುವ ಜನರ ಸಮಸ್ಯೆಗಳ ಕುರಿತ ವರದಿಗಳನ್ನು ಪರಿಶೀಲಿಸಿ, ಅವುಗಳಿಗೆ ತಕ್ಷಣವೇ ಸ್ಪಂದಿಸಬೇಕು.

ಕುಡಿಯುವ ನೀರಿನ ತೊಂದರೆಯಾಗಬಾರದು. ಟ್ಯಾಂಕರ್, ಖಾಸಗಿ ಕೊಳವೆಬಾವಿ ಸೇರಿದಂತೆ ಯಾವುದೇ ಜಲಮೂಲಗಳಿಂದ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು. ನೀರು ಪೂರೈಕೆಗೆ ಅಗತ್ಯವಿರುವ ಅನುದಾನವನ್ನು ರಾಜ್ಯ ಸರ್ಕಾರ ಒದಗಿಸಲಿದೆ.

**ನರೇಗಾ ಉದ್ಯೋಗ ದಿನ ಹೆಚ್ಚಿಸಲು ಕೇಂದ್ರಕ್ಕೆ ಮನವಿ:**

ಬರಗಾಲ ಸಂದರ್ಭದಲ್ಲಿ ನರೇಗಾ ಉದ್ಯೋಗ ದಿನಗಳನ್ನು 100 ರಿಂದ 150 ದಿನಗಳಿಗೆ ಹೆಚ್ಚಿಸಬೇಕು ಎಂದು ಕೋರಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ. ನರೇಗಾ ಉದ್ಯೋಗ ದಿನಗಳನ್ನು ಹೆಚ್ಚಿಸುವುದರಿಂದ ಜನರು ಗುಳೆ ಹೋಗುವುದನ್ನು ತಪ್ಪಿಸಬಹುದು ಎಂದು ಮುಖ್ಯಮಂತ್ರಿಗಳು ಹೇಳಿದರು.

ಕುಡಿಯುವ ನೀರು ಸಮಸ್ಯೆ ಕಂಡುಬಂದಾಗ ಅಧಿಕಾರಿಗಳು ತಕ್ಷಣವೇ ಸ್ಪಂದಿಸಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದರು.

ಜನರ ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸಲು ಅನುಕೂಲವಾಗುವಂತೆ ತಾಲ್ಲೂಕು ಮಟ್ಟದಲ್ಲಿ ಕಂಟ್ರೋಲ್ ರೂಮ್ ಆರಂಭಿಸಬೇಕು. ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾ-ರಿಗಳು ರಜೆ ಮೇಲೆ ತೆರಳದೇ ಜನರ ಸಮಸ್ಯೆ ನಿವಾರಣೆಗೆ ಶ್ರಮಿಸಬೇಕು. ತಾಲ್ಲೂಕುಮಟ್ಟದ ಟಾಸ್ಕ್ ಫೋರ್ಸ್‌ಗಳು ನಿಯಮಿತವಾಗಿ ಸಭೆ ನಡೆಸುವ ಮೂಲಕ ಮುಂಜಾಗ್ರತಾ ಕ್ರಮಗಳ ಬಗ್ಗೆ ನಿರ್ಧರಿಸಬೇಕು ಎಂದು ಹೇಳಿದರು.

ಮೇವಿನ ಕಿಟ್ ಗಳನ್ನು ರೈತ-ರಿಗೆ ನೀಡಲಾಗಿದೆ. ರೈತರಯ ಬೆಳೆದ ಮೇವು ಶೇಖರಣೆಗೆ ಕ್ರಮ ವಹಿಸಬೇಕು. ಇದಲ್ಲದೇ ಅಂತರ್ ಜಿಲ್ಲಾ ಮೇವು ಸಾಗಾಣಿಕೆ ಮೇಲೆ ನಿಗಾ ವಹಿಸಬೇಕು. ಬರ ನಿರ್ವಹಣೆಗೆ ಸರಕಾರ ಅನೇಕ ಕ್ರಮಗಳನ್ನು ಈಗಾಗಲೇ ತೆಗೆದುಕೊಂಡಿದೆ. ಐದು ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನದಿಂದ ಈ ಬಾರಿ ಬರಗಾಲದ ತೀವ್ರತೆಯಲ್ಲಿಯೂ ಜನ-ರಿಗೆ ಅನುಕೂಲವಾಗಿದೆ. ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿ 855 ಕೋಟಿ ರೂಪಾಯಿ ಅನುದಾನವಿದೆ. ಹೆಚ್ಚುವರಿಯಾಗಿ ಪ್ರತಿ ಜಿಲ್ಲೆಗೆ ಎರಡು ಕೋಟಿ ರೂಪಾಯಿ ಅನುದಾನ ನೀಡಲಾಗುವುದು ಎಂದರು.

ವಿದ್ಯುಚ್ಛಕ್ತಿ ತೊಂದರೆಯಾಗಬಾರದು. ಹೊಸ ಕೊಳವೆಬಾವಿಗಳಿಗೆ ಯಾವುದೇ ನೆಪ ಹೇಳದೇ ಕೂಡಲೇ ವಿದ್ಯುತ್ ಸಂಪರ್ಕ ಒದಗಿಸಬೇಕು ಎಂದು ಕೆಪಿಟಿಎಸಿಎಲ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಅಗತ್ಯ ಕಂಡುಬಂದರೆ ಖಾಸಗಿ ಕೊಳವೆಬಾವಿಗಳು ಹಾಗೂ ಟ್ಯಾಂಕರ್ ಗಳ ಮಾಲೀಕರ ಜತೆ ಮುಂಚಿತವಾಗಿಯೇ ಒಪ್ಪಂದ ಮಾಡಿಕೊಳ್ಳಬೇಕು. ಹೀಗೆ ಮಾಡುವ ಮೂಲಕ ಜೂನ್ ಅಂತ್ಯದವರೆಗೆ ನೀರು ಕೊರತೆಯಾಗದಂತೆ ಎಚ್ಚ-ರಿಕೆ ವಹಿಸಬಹುದು. ಇದರಲ್ಲಿ ನಿರ್ಲಕ್ಯ ತೋರುವ ಅಧಿಕಾರಿಗಳ ಮೇಲೆ ಶಿಸ್ತುಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಚುನಾವಣಾ ನೀತಿಸಂಹಿತೆ ಜಾ-ರಿಯಾಗಲಿರುವುದರಿಂದ ಚುನಾವಣಾ ಕೆಲಸದ ಜತೆಗೆ ಬರ ನಿರ್ವಹಣೆಯನ್ನು ನಿರ್ಲಕ್ಷಿಸಬಾರದು. ಬರನಿರ್ವಹಣೆಗೆ ನೀತಿಸಂಹಿತೆಯು ಅಡ್ಡಿಯಾಗುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

**ಬರನಿರ್ವಹಣೆಗೆ ಸಾಕಷ್ಟು ಅನುದಾನ ಲಭ್ಯ:**

ಸಿಎಂ ಸಭೆಯ ಬಳಿಕ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ನಡೆಸಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ಬೇಸಿಗೆ ಹಿನ್ನೆಲೆಯಲ್ಲಿ ಅಂತರ್ಜಲ ಮಟ್ಟ ಕಾಯ್ದುಕೊಳ್ಳುವ ಅಗತ್ಯವಿರುವುದರಿಂದ ಕುಡಿಯುವ ನೀರಿನ ಉದ್ದೇಶಕ್ಕೆ ಮಾತ್ರ ಕೊಳವೆಬಾವಿಗಳನ್ನು ಕೊರೆಯಲು ಅನುಮತಿ ನೀಡಬೇಕು ಎಂದು ತಿಳಿಸಿದರು.

ಚುನಾವಣೆ ಘೋಷಣೆಯಾದರೂ ಬರ ನಿರ್ವಹಣಾ ಕಾರ್ಯಕ್ಕೆ ತೊಂದರೆ ಇಲ್ಲ. ಸಾಕಷ್ಟು ಹಣಕಾಸು ಲಭ್ಯವಿರುವುದರಿಂದ ಯಾವುದೇ ಕಾರಣಕ್ಕೂ ಕುಡಿಯುವ ನೀರಿನ ಕೊರತೆಯಾಗದಂತೆ ಅಧಿಕಾ-ರಿಗಳು ಎಚ್ಚರಿಕೆ ವಹಿಸಬೇಕು. ಕುಡಿಯುವ ನೀರಿನ ಉದ್ದೇಶಕ್ಕೆ ಕೊರೆಯಲಾಗುವ ಹೊಸ ಕೊಳವೆಬಾವಿಗಳಿಗೆ ತಕ್ಷಣವೇ ವಿದ್ಯುತ್ ಸಂಪರ್ಕ ಒದಗಿಸಬೇಕು.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಮಹಾನಗರ ಪಾಲಿಕೆ ಆಯುಕ್ತರಾದ ಪಿ.ಎನ್.ಲೋಕೇಶ್ ಮತ್ತಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

## ಪ್ರೀತಿ ವಿಚಾರಕ್ಕೆ ಹಲ್ಲೆ; ಚಿಕಿತ್ಸೆ ಫಲಿಸಿದೇ ಯುವಕ ಸಾವು

ಕಲಬುರಗಿ: ನಗರದ ಖಾಸಗಿ ಕಾಲೇಜಿನಲ್ಲಿ ಬಿಎಸ್ಸಿ ನರ್ಸಿಂಗ್ ಎರಡನೇ ಸೆಮಿಸ್ಟರ್ ವ್ಯಾಸಾಂಗ ಮಾಡುತ್ತಿದ್ದ ಅಭೀಷಕ್(18) ಇತ್ತೀಚಿಗಷ್ಟೇ ಪರೀಕ್ಷೆ ಕೂಡ ಬರೆದಿದ್ದನು. ಇದರ ಮಧ್ಯೆ ಅಪ್ರಾಪ್ತ ಬಾಲಕಿಯೊಂದಿಗೆ ಪ್ರೀತಿಯ ಬಲೆಯಲ್ಲಿ ಬಿದ್ದಿದ್ದ ಅಭಿಷೇಕ್, ಆಕೆಯೊಂದಿಗ ಪ್ರೀತಿ ಮಾಡುತ್ತಿದ್ದನಂತೆ.

ಹೀಗಾಗೇ ಮೊನ್ನೆ ರಾತ್ರಿ ಆಕೆಯೇ ಫೋನ್ ಮಾಡಿ ಮನೆಗೆ ಕರೆಯಿಸಿಕೊಂಡಿದ್ದಳಂತೆ. ಹಾಗೇ ಹೋದ ಅಭಿಷೇಕ್, ಆಕೆಯ ಕುಟುಂಬಸ್ಥರ ಕೈಗೆ ಸಿಕ್ಕಿಬಿದ್ದಿದ್ದ. ಎಲ್ಲರೂ ಆತನನ್ನ ಮನಬಂದಂತೆ ಥಳಿಸಿದ್ದರು. ಮಾರಣಾಂತಿಕ ಹಲ್ಲೆಗೊಳಗಾಗಿದ್ದ ಅಭೀಷಕ್ನನ್ನ ಜಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿ-ತ್ತು. ಇಂದು ಬೆಳಿಗ್ಗೆ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾನೆ.



ಅಭಿಷೇಕ್ ಮತ್ತು ಅಪ್ರಾಪ್ತೆ, ಪ್ರೀತಿಯೆಂಬ ಮಾಯಾ ಜಾಲಕ್ಕೆ ಸಿಲುಕಿ ಕ್ಷಣಕ್ಷಣಕ್ಕೂ ವಾಟ್ಸಪ್ ಮೇಸೆಜ್ ಮಾಡುತ್ತಿದ್ದರು. ಅದರಂತೆ ಅಪ್ರಾಪ್ತೆ ಪೋಷಕರು ಆಕೆಯಿಂದಲೇ ಅಭಿಷೇಕನಿಗೆ ಕಾಲ್ ಮಾಡಿಸಿ ಮನೆಗೆ ಬರ್ತಡೇ ಪಾರ್ಟಿ ಇದೆ ಬಾ ಎಂದು ಕರೆಯಿಸಿಕೊಂಡಿದ್ದಾರೆ. ಈ ವೇಳೆ ಮನೆಯವರು ಅಭಿಷೇಕನಿಗೆ ಮನೆಯಲ್ಲಿ ಕೂಡಿಹಾಕಿ ರಾಡ್‌ನಿಂದ ಎರಡು ಗಂಟೆಗಳ ಕಾಲ ಥಳಿಸಿದ್ದಾರೆ. ಆಕೆ ಸಹ ಬಿಡಿಸಿಕೊಳ್ಳಲು ಬಂದಾಗ ಕೇರ್ ಮಾಡದೇ ಮನಬಂದಂತೆ ಹೊಡೆದಿದ್ದರು.

ಗಂಭೀರ ಸ್ಥಿತಿಯಲ್ಲಿದ್ದ ಅಭಿಷೇಕನನ್ನ ತಕ್ಷಣ ನಿರ್ಜನ ಪ್ರದೇಶದಲ್ಲಿ ಬಿಸಾಕಿ ಕೈ ತೊಳೆದುಕೊಂಡಿದ್ದಾರೆ. ಈ ಸಂಬಂಧ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ (ಪ್ರೇರಣಾ) ಸೇರಿದಂತೆ ಐದು ಜನರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಇನ್ನು ಕೊಲೆ ಮಾಡಿದ ಕೊಲೆಗಡುಕ-ರಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಅಭಿಷೇಕನ ಕುಟುಂಬಸ್ಥರು ಆಗ್ರಹಿಸಿದ್ದಾರೆ. ಅದೇನೇ ಇರಲಿ ತಾನಾಯಿತು ತನ್ನ ಓದು ಆಯಿತು ಎಂದು ಸುಮ್ಮನೆ ಇರುತ್ತಿದ್ದರೇ, ಬಾಳಿ ಬದುಕಬೇಕಿದ್ದ ಯುವಕ ಅಭಿಷೇಕ್, ಇಂದು ಬೀದಿ ಹೆಣವಾಗುತ್ತಿರಲಿಲ್ಲ. ಒಟ್ಟಿನಲ್ಲಿ ಪ್ರೀತಿ ವಿಚಾರಕ್ಕೋ ಅಥಾವ ಇನ್ಯಾವ ಕಾರಣ-ಕ್ಕೆ ಕೊಲೆಯಾಗಿದೆ ಎನ್ನುವುದು ತನಿಖೆ ನಂತರವಷ್ಟೇ ತಿಳಿಯಲಿದೆ.

## ಭರತೇಶ ಕ್ರೀಡಾಪಟುಗಳ ಸಾಧನೆ



ಬೆಳಗಾವಿ: ಇತ್ತಿಚಿಗೆ ಆಸಾಮ ರಾಜ್ಯದ ಗೌಹಾಟಿಯಲ್ಲಿ ನಡೆದ 2023-24 ನೇ ಸಾಲಿನ ಖೆಲೊ ಇಂಡಿಯಾ ಅಂತರ್ ವಿಶ್ವ ವಿದ್ಯಾಲಯಗಳ ಕ್ರೀಡಾಕೂಟದಲ್ಲಿ ಬೆಳಗಾವಿಯ ಜೆಜಿಎನ್‌ಡಿ ಭರತೇಶ ಮಹಾವಿದ್ಯಾಲಯದ ಕ್ರೀಡಾಪಟುಗಳು ಭಾಗವಹಿಸಿ 4ಘಿ400 ರಿಲೆ ಓಟದಲ್ಲಿ ಕಂಚಿನ ಪದಕ ಪಡೆಯವುದರ ಮೂಲಕ ಸಾಧನೆಗೈದಿದ್ದಾರೆ.

ಮಹಾವಿದ್ಯಾಲಯದ ಕ್ರೀಡಾಪಟುಗಳಾದ ತುಷಾರ ಬೆಕನೆ, ಚೈತನ್ಯ ಮುದಲಿಯಾರ ಹಾಗೂ ಭುವನ ಪೂಜೆರಿ ಈ ಕ್ರೀಡಾಪಟುಗಳು ಭಾಗವಹಿಸಿ ಸಾಧನೆ ಮಾಡಿದ್ದಾರೆ. ಸಾಧನೆಗೈದ ಕ್ರೀಡಾಪಟುಗಳನ್ನು ಭರತೇಶ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು ಹಾಗೂ ಮಹಾವಿದ್ಯಾಲಯದ ಸಿಬಂದಿ ವರ್ಗದವರು ಸನ್ಮಾನಿಸಿ ಗೌರವಿಸಿದರು.

## ಪುರುಷ ಪ್ರಧಾನ ಸಮಾಜದಲ್ಲಿ ಹೆಣ್ಣುಮಕ್ಕಳೇ ಸ್ಟ್ರಾಂಗು: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿಕೆ

ಬೆಳಗಾವಿ: ಪ್ರತಿ ಕ್ಷೇತ್ರದಲ್ಲೂ ಹೆಣ್ಣುಮಕ್ಕಳು ತಮ್ಮದೇ ಛಾಪು ಮೂಡಿಸುತ್ತಿದ್ದಾರೆ. ಶಾರೀರಕವಾಗಿ ಪುರುಷ-ರಿಗಿಂತ ಹೆಣ್ಣುಮಕ್ಕಳು ಗಟ್ಟಿ ಇಲ್ಲದಿದ್ದರೂ ಮಾನಸಿಕವಾಗಿ ತುಂಬಾ ಸದೃಢರು. ರಾಜಕೀಯ, ಶಿಕ್ಷಣ, ಕೃಷಿ ಕ್ಷೇತ್ರದಲ್ಲಿ ಗಂಡಸ-ರಿಗೆ ಹೆಗಲಾಗಿ ದುಡಿಯುತ್ತಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಸ್ವಯಂ ಸೇವಾ ಸಂಸ್ಥೆ (ಎನ್ ಜಿಒ) ಕರ್ನಾಟಕ ಹೆಲ್ತ್ ಪ್ರಮೋಷನ್ ಟ್ರಸ್ಟ್ (ಕೆ-ಎಚ್‌ಪಿಟಿ) ವತಿಯಿಂದ ನಡೆದ "ಸ್ಫೂರ್ತಿ" ಹದಿಹರೆಯದ ಹೆಣ್ಣು ಮಕ್ಕಳೊಂದಿಗೆ ನೇರ ಸಂದರ್ಶನ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ, ಮಾತನಾಡಿದ ಸಚಿವರು, ಹೆಣ್ಣು ಸಂಸಾರದ ಕಣ್ಣು. ಬಾಲ್ಯ ವಿವಾಹವನ್ನು ಬೇರು ಸಮೇತ ಕಿತ್ತು ಹಾಕಬೇಕು ಎಂಬುದು ಸರ್ಕಾರದ ಆಶಯ. ಇದಕ್ಕೆ ಪಾಲಕರು, ಮಹಿಳೆಯರು ಎಲ್ಲರೂ ಒಗ್ಗಟ್ಟಾಗಿ ಹೋರಾಡಬೇಕು ಎಂದು ಹೇಳಿದರು.

ದೇವರಿಗಿಂತ ಹೆಚ್ಚಾಗಿ ಪಾಲಕರನ್ನು ಗೌರವಿಸಬೇಕು. ಪ್ರೀತಿ, ಪ್ರೇಮ ಅಂತ ಹೋಗದೆ, ತಂದೆ-ತಾಯಿ ಹೇಳಿದಂತೆ ನಡೆದುಕೊಂಡು ಉತ್ತಮ ಶಿಕ್ಷಣ ಪಡೆಯಬೇಕು ಎಂದು ಸಚಿವರು ಹೇಳಿದರು.



ಲಿಂಗ ತಾರತಮ್ಯದ ವಿರುದ್ಧ ಎಲ್ಲರೂ ಹೋರಾಡೋಣ. ಬಾಲ್ಯ ವಿವಾಹ ಹಾಗೂ ಭ್ರೂಣ ಹತ್ಯೆ ಸಮಾಜಕ್ಕೆ ಕಂಟಕವಾಗಿವೆ. ದೇಶಕ್ಕೆ ಅತಿಹೆಚ್ಚು ಒಲಿಂಪಿಕ್ಸ್ ಪದಕ ಗೆದ್ದುಕೊಟ್ಟಿರುವುದು ಹೆಣ್ಣುಮಕ್ಕಳೇ, ಹೆಚ್ಚು ಐಎಎಸ್ ಅಧಿಕಾರಿಗಳು ಮಹಿಳೆಯ-ರಿದ್ದಾರೆ. ಪ್ರತಿ ವರ್ಷ ಎಸ್-ಎಸ್‌ಎಲ್‌ಸಿ, ಪಿಯುಸಿಯಲ್ಲಿ ಬಾಲಕಿಯರೇ ಮೇಲುಗೈ ಸಾಧಿಸುತ್ತಾ ಬಂದಿದ್ದಾರೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

**ವೈದ್ಯಳಾಗುವ ಕನಸಿತ್ತು**

ನನಗೆ ಚಿಕ್ಕಂದಿನಿಂದಲೂ ವೈದ್ಯಳಾಗುವ ಕನಸಿತ್ತು. ಆದರೆ, ಪುರುಷ ಪ್ರಧಾನ ಸಮಾಜದಲ್ಲಿ ಕರ್ನಾಟಕದ 7 ಕೋಟಿ ಜನ-ರಿಗೆ ಮಹಿಳಾ ಮಂತ್ರಿಯಾಗಿರುವ ಬಗ್ಗೆ ಹೆಮ್ಮೆಯಿದೆ ಎಂದು ಹೇಳಿದರು.

ನಾನು ಕೂಡ ಸರ್ಕಾರಿ ಶಾಲೆಯಲ್ಲಿ ಓದಿ, ಕೆಂಪು ಬಸ್‌ನಲ್ಲಿ ಓಡಾಡಿರುವೆ. ಎಲ್ಲಾ ಕಷ್ಟಗಳನ್ನು ಮೆಟ್ಟಿನಿಂತು ವಿಧಾನಸೌಧಕ್ಕೆ ಪ್ರವೇಶಿಸಿರುವೆ. ಜೊತೆಗೆ ನನ್ನ ತಮ್ಮನನ್ನು (ವಿಧಾನಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ) ವಿಧಾನಸೌಧಕ್ಕೆ ಕರೆದುಕೊಂಡು ಹೋಗಿರುವೆ. ಹೆಣ್ಣು ಮನಸ್ಸು ಮಾಡಿದರೆ ಏನು ಬೇಕಾದರೂ ಸಾಧಿಸಬಹುದು ಎಂಬುದಕ್ಕೆ ನಾನೇ ಸಾಕ್ಷಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಕೆ. ಹೆಚ್. ಪಿ. ಟಿ ನಿರ್ದೇಶಕಿ ಶೋಭಾ ಡಿ. ಕೆ. ಹೆಚ್. ಪಿ. ಟಿ ಟೀಮ್ ಲೀಡರ್ ಸತ್ಯನಾರಾಯಣ ಜಿ, ಪ್ರೊಗ್ರಾಮ್ ಡೈರೆಕ್ಟರ್ ಅಶೋಕ ಕೋಳಿ ಉಪಸ್ಥಿತರಿದ್ದರು.

## ಲೋಕಾಯುಕ್ತ ಜನ ಸಂಪರ್ಕ ಸಭೆ

ಬೆಳಗಾವಿ: ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳ ಕಛೇರಿ ಸಭಾಭವನದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆಯನ್ನು ಮಾರ್ಚ.13 ರಂದು ಬೆಳ್ಳಿಗ್ಗೆ 11 ಗಂಟೆಯಿಂದ 2 ಗಂಟೆಯವರೆಗೆ ಆಯೋಜಿಸಲಾಗಿದೆ.

ಸರ್ಕಾರಿ ಕಛೇರಿಯಲ್ಲಿನ ಅಧಿಕಾರಿಗಳು ಸಾರ್ವಜನಿಕರ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದಲ್ಲಿ ಹಾಗೂ ಸರ್ಕಾರಿ ಅಧಿಕಾರಿಗಳು ಕೆಲಸ ಮಾಡಿಕೊಡುವಲ್ಲಿ ಹಣ-ಕ್ಕೆ ಬೇಡಿಕೆ ಇಟ್ಟಲ್ಲಿ/ಒತ್ತಾಯಿಸಿದಲ್ಲಿ ಅಥವಾ ಸರ್ಕಾರಿ ಅಧಿಕಾರಿಯ ಅಕ್ರಮ ಆಸ್ತಿ ಸಂಪಾದನೆ ಬಗ್ಗೆ ಮಾಹಿತಿ ಇದ್ದಲ್ಲಿ, ಲೋಕಾಯುಕ್ತ ಅಧಿಕಾರಿಗಳಿಗೆ ನೇರವಾಗಿ/ಗುಪ್ತವಾಗಿ ಮಾಹಿತಿ ನೀಡಬಹುದಾಗಿದೆ.

ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದಾಗಿದೆ ಎಂದು ಲೋಕಾಯುಕ್ತ ಪೋಲಿಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆಗಳಾದ (1) 0831-2950756 ಮತ್ತು (2) 0831-2421922 ನೇದ್ದವುಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಲೋಕಾಯುಕ್ತ ಪೊಲೀಸ್ ಆಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಬೆಳಗಾವಿಯ ಹೋಟೇಲ್ ಸಂಕಮ ರೆಸಿಡೆನ್ಸಿಯಲ್ಲಿ ತೊಟಗಾ-ರಿಕಾ ರೈತ ಮಹಿಳೆಯರಿಗಾಗಿ ಮಂಗಳವಾರ ಏರ್ಪಡಿಸಲಾಗಿದ್ದ ತೋಟಗಾರಿಕೆ ತರಬೇತಿ ಕಾರ್ಯಕ್ರಮವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಜಿವಾಗ್ರೋ ಕಂಪನಿಯ ಚಿರಾಗ್ ಜೈನ್, ಸೂರ್ಯಂ ಚಪ್ಪರ್, ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್ ಮೊದಲಾದವರು ಭಾಗವಹಿಸಿದ್ದರು.

# ಆರ್.ಎಲ್ ಕಾನೂನು ಕಾಲೇಜಿನಲ್ಲಿ ಮಾ.8 ರಿಂದ 10ರವರೆಗೆ ರಾಷ್ಟ್ರಮಟ್ಟದ ಅಣಕು ನ್ಯಾಯಾಲಯ ಸ್ಪರ್ಧೆ

ಬೆಳಗಾವಿ: ನಗರದ ಕೆ.ಎಲ್.ಎಸ್ ಸೊಸೈಟಿಯ ರಾಜ ಲಖಮಗೌಡ ಕಾನೂನು ಮಹಾವಿದ್ಯಾಲಯ ಎಂ.ಕೆ ನಂಬಿಯಾರ್ ಸ್ಮರಣಾರ್ಥ 14ನೇ ರಾಷ್ಟ್ರಮಟ್ಟದ ಅಣುಕು ನ್ಯಾಯಾಲಯ ಸ್ಪರ್ಧೆಯ ಕು-ರಿತ ಪತ್ರಿಕಾಗೋಷ್ಠಿ ಆದರ್ಶ ಪ್ಯಾಲೇಸನಲ್ಲಿ ಏರ್ಪಡಿಸಿದ್ದರು.

ಪತ್ರಿಕಾಗೋಷ್ಠಿ ಕುರಿತು ಮಾತನಾಡಿದ ಕೆ. ಎಲ್.ಎಸ್ ಸೊಸೈಟಿಯ ಕಾರ್ಯದರ್ಶಿ ಶ್ರೀ.ವಿವೇಕ ಕುಲಕರ್ಣಿ ಹಾಗೂ ಶ್ರೀ.ಎಸ್ ವಿ ಗಣಾಚಾರಿ ರಾಷ್ಟ್ರಮಟ್ಟದ ಅಣುಕು ನ್ಯಾಯಾಲಯ ಸ್ಪರ್ಧೆಯು ಮಾರ್ಚ್ 8 ರಂದು ಸಂಜೆ 5:30 ಗಂಟೆಗೆ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶ ಅನಿಲ ಕಟ್ಟಿ ಮುಖ್ಯ ಅತಿಥಿಗಳಾಗಿ ಮತ್ತು ವಿ. ಜಿ. ಕುಲಕರ್ಣಿ ಅವರ ಅಧ್ಯಕ್ಷತೆಯಲ್ಲಿ ಉದ್ಘಾಟನೆಗೊಳ್ಳಲಿದೆ ಎಂದು ತಿಳಿಸಿದರು.

ಗುಜರಾತ್, ಉತ್ತರ ಪ್ರದೇಶ, ಒರಿಸ್ಸಾ, ಮಧ್ಯಪ್ರದೇಶ, ಉತ್ತರಾಖಂಡ, ತಮಿಳುನಾಡು, ಗೋವಾ, ಪಂಜಾಬ್ ಹಾಗೂ ಮಹಾರಾಷ್ಟ್ರ ರಾಜ್ಯಗಳಿಂದ 35 ತಂಡಗಳು ಹಾಗೂ ದೇಶದ 5 ರಾಷ್ಟ್ರೀಯ ಕಾನೂನು ಶಾಲೆಗಳು ಒಳಗೊಂಡಂತೆ ಒಟ್ಟು 40 ತಂಡಗಳು ಸ್ಪರ್ಧಿಸಲಿವೆ ಎಂದು ಮಾಹಿತಿ ನೀಡಿದರು.

ಸ್ಪರ್ಧೆಯ ಅಂತಿಮ ಸುತ್ತು ಮಾರ್ಚ್ 10 ರಂದು ಮಧ್ಯಾಹ್ನ 12 ಗಂಟೆಗೆ ಜರುಗಲಿದ್ದು,




ಕರ್ನಾಟಕದ ಉಚ್ಚ ನ್ಯಾಯಾಲಯದ ನ್ಯಾಯಾಧೀಶ ಇ. ಎಸ್ ಇಂದಿರೇಶ್ ಹಾಗೂ ಉಚ್ಚ ನ್ಯಾಯಾಲಯದ ನ್ಯಾಯವಾದಿಗಳು ತೀರ್ಪುಗಾರರಾಗಿ ಭಾಗವಹಿಸಲಿದ್ದಾರೆ.

ಸ್ಪರ್ಧೆಯ ಬಹುಮಾನ ನಗದು ಮತ್ತು ಟ್ರೋಫಿಯನ್ನು ಒಳಗೊಂಡಿದ್ದು, ಉತ್ತಮ ವಾದಮಂಡಕ ಹಾಗೂ ವಾದ ಮಂಡಕಿ ತಲಾ 15,000/- ನಗದು ಹಾಗೂ ಟ್ರೋಫಿ ಪಡೆಯಲಿದ್ದು, ಉತ್ತಮ ಜ್ಞಾಪಕ ಪತ್ರ 15,000/- ನಗದು ಮತ್ತು ಟ್ರೋಫಿಯನ್ನು ಪಡೆಯಲಿದೆ. ಇನ್ನುಳಿದಂತೆ ರನ್ನರ್ ಅಪ್ ತಂಡ 30,000/- ನಗದಿನೊಂದಿಗೆ ಟ್ರೋಫಿ ಹಾಗೂ ವಿಜೇತ ತಂಡ 50,000/- ನಗದಿನೊಂದಿಗೆ ಟ್ರೋಪಿಯನ್ನು ಗೆಲ್ಲಲಿದೆ. ಹಾಗೂ ಪ್ರಶಸ್ತಿಗಳ ಒಟ್ಟು ನಗದು 1,35,000/- ಒಳಗೊಂಡಿದೆ ಎಂದು ಕೆ ಎಲ್, ಎಸ್ ಸೊಸೈಟಿಯ ಸದಸ್ಯ ಆರ್.ಎಸ್ ಮುತಾಲಿಕ್ ಮಾಹಿತಿ ನೀಡಿದರು.

ಮುಂದುವರೆದು ಮಾತನಾಡಿದ ಅವರು ಉಚ್ಚ ನ್ಯಾಯಾಲಯದ ನ್ಯಾಯಾಧೀಶ ಇ. ಎಸ್ ಇಂದಿರೇಶ್ ಮಾರ್ಚ್ 10 ರ ಸಂಜೆ 4:00 ಕ್ಕೆ, ಕೆ. ಕೆ. ವೇಣುಗೋಪಾಲ್ ಸಭಾಂಗಣದಲ್ಲಿ ಸಮಾರೋಪ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿಯೂ ಸಹ ಉಪಸ್ಥಿತರಿರುವರು. ಕೆ.ಎಲ್.ಎಸ್ ಸೊಸೈಟಿಯ ಅಧ್ಯಕ್ಷ ಶ್ರೀ ಅನಂತ ಮಂಡಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ, ಹಾಗೂ ಆಡಳಿತ ಮಂಡಳಿ ಚೇರ್ಮನ್ ಶ್ರೀ. ಪಿ.ಎಸ್ ಸಾವಕಾರ್ ಗೌರವ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಎಂದು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಕಾಲೇಜಿನ ಆಡಳಿತ ಮಂಡಳಿ ಸದಸ್ಯ ಶ್ರೀ. ವಿ.ಎಮ್ ದೇಶಪಾಂಡೆ, ಪ್ರಾಚಾರ್ಯ ಡಾ. ಎ.ಎಚ್ ಹವಾಲ್ದಾರ್, ಅಣುಕು ನ್ಯಾಯಾಲಯ ಸ್ಪರ್ಧೆಯ ಸಂಂ-ಯೋಜಕಿ ಅಶ್ವಿನಿ ಪರಬ್ ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089